ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:78
ಸಂಪುಟ: 05 ಸಂಚಿಕೆ: 78
Date:04-04-2026 Saturday
RNI NO : KARKAN/2021/80805
L2/RNP-1285/TMR/2025-27
Page :4 ಪುಟ : 4
Price: 1.00 ಬೆಲೆ: 1.00 ರೂ

## ಸರ್ಕಾರದಿಂದ ಆಚರಿಸುವ ಜಗಜೀವನರಾಂ-ಅಂಬೇಡ್ಕರ್ ಜಯಂತಿಗಳ ಬಹಿಷ್ಕರ: ಸಭೆಯಿಂದ ಹೊರ ನಡೆದ ಮುಖಂಡರು





ತುಮಕೂರು: ಕಳೆದ 35 ವರ್ಷಗಳಿಂದ ಪರಿಶಿಷ್ಠ ಜಾತಿಯಲ್ಲಿ ಒಳಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ರಾಜ್ಯದಲ್ಲಿ ಸಂಘಟನೆಗಳು ನಡೆಸುತ್ತಿರುವ ಹೋರಾಟವನ್ನು ಕಡೆಗಣಿಸಿರುವ ಕಾಂಗ್ರೆಸ್ ಸರ್ಕಾರಕ್ಕೆ ದಲಿತ ಸಮುದಾಯದ ಎರಡು ಕಣ್ಣುಗಳಾದ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಗಳನ್ನು ಆಚರಿಸುವ ನೈತಿಕತೆಯೇ ಇಲ್ಲದಂತಾಗಿದೆ ಎಂದು ಜಿಲ್ಲಾಡಳಿತದಿಂದ ಇಬ್ಬರ ಮಹಾನಿಯರ ಜಯಂತಿಗಳಲ್ಲಿ ಭಾಗವಹಿಸುವುದಿಲ್ಲ ಎಂದು ಪೂರ್ವಭಾವಿ ಸಭೆಯಿಂದ ಮಾದಿಗ ಮುಖಂಡರು ಹೊರ ನಡೆದ ಘಟನೆ ತುಮಕೂರಿನಲ್ಲಿ ನಡೆದಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಡಾ.ಬಾಬುಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆಯನ್ನು ಬಹಿಷ್ಕರಿಸಿದ ಒಳಮೀಸಲಾತಿ ಹೋರಾಟಗಾರರು ಜಿಲ್ಲಾಡಳಿತ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಮಾ.27ರಂದು ನಡೆಯಬೇಕಿದ್ದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ 56432 ಹುದ್ದೆಗಳ ನೇಮಕಾತಿಯಲ್ಲಿಒಳಮೀಸಲಾತಿ ಕಲ್ಪಿಸುವುದಾಗಿ ದಿನಾಂಕ:12/3/ 2026 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ನಲ್ಲಿ ನಡೆದ ಪ್ರತಿಭಟನಾ ಸಮಾವೇಶದಲ್ಲಿ ಮುಖ್ಯಮಂತ್ರಿಗಳು, ಹೋರಾಟಗಾರರೊಂದಿಗೆ ಚರ್ಚಿಸಿ, ನಾಲ್ವರು ಸಚಿವರಗಳನ್ನು ಸಭೆಗೆ ಕಳುಹಿಸಿ ಆಶ್ವಾಸನೆ ನೀಡಿದ್ದರು. ಅದರಂತೆ ಪ್ರತಿಭಟನೆಯನ್ನು ಹಿಂಪಡೆಯ ಲಾಗಿತ್ತು. ಆದರೆ ಮಾದಿಗ ಸಮುದಾಯಕ್ಕೆ ನೀಡಿದ್ದ ಮಾತಿಗೆ ತಪ್ಪಿರುವ ಮುಖ್ಯಮಂತ್ರಿಗಳು, ಮಾದಿಗ ಸಮುದಾಯವನ್ನು ಕಡೆಗಣಿಸುತ್ತಿರುವ ಕಾಂಗ್ರೆಸ್ ಸರ್ಕಾರದ ನಡೆಯನ್ನು ಖಂಡಿಸಿ ರಾಜ್ಯದಲ್ಲಿ ಸರ್ಕಾರದ ವತಿಯಿಂದ ನಡೆಯುವ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿಗಳನ್ನು ಬಹಿಷ್ಕರಿಸುವುದರ ಮೂಲಕ ರಾಜ್ಯದ ಒಳ ಮೀಸಲಾತಿ ಐಕ್ಯ ಹೋರಾಟ ಸಮಿತಿ ಪರ್ಯಾಯವಾಗಿ ಸಂಘಟನೆಗಳಿಂದಲೇ ಜಯಂತಿಗಳನ್ನು ಆಚರಿಸಲು ತೀರ್ಮಾನಿಸಲಾಗಿದೆ.

ಅದರಂತೆ ದಿನಾಂಕ: 05/4/2026 ರಂದು ತುಮಕೂರು ನಗರದ ನಾಗಾರ್ಜುನ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಡಾ.ಬಾಬು ಜಗಜೀವನರಾಂ ಜಯಂತಿ ಆಚರಿಸಲು ತೀರ್ಮಾನಿಸಿದ್ದು, ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಲಾಗಿದೆ.

ಈ ವೇಳೆ ಮಾತನಾಡಿದ ಒಳಮೀಸಲಾತಿ ಹೋರಾಟ ಸಮಿತಿ ರಾಜ್ಯ ಕಾರ್ಯಾಧ್ಯಕ್ಷರಾದ ಪಾವಗಡ ಶ್ರೀರಾಂ ಅವರು ಒಳ ಮೀಸಲಾತಿ ಜಾರಿಗೊಳಿಸದ ರಾಜ್ಯ ಸರ್ಕಾರಕ್ಕೆ ನೈತಿಕತೆ ಇಲ್ಲದೇ ಇರುವುದರಿಂದ ದಲಿತರ ಕಣ್ಮಣಿಗಳಾದ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಮಾಲಾರ್ಪಣೆ ಮಾಡಲು ಸಹ ರಾಜ್ಯದಲ್ಲಿ ಅವಕಾಶ ನೀಡುವುದಿಲ್ಲ ಎಂದು ಹೇಳಿದರು.

ತುಮಕೂರು ಜಿಲ್ಲೆಯ ಹತ್ತು ತಾಲ್ಲೂಕುಗಳಲ್ಲಿಯೂ ಸಹ ಇದೇ ರೀತಿ ಸರ್ಕಾರದ ವತಿಯಿಂದ ಆಚರಿಸುವ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಬಹಿಷ್ಕರಿಸುವ ಮೂಲಕ ಒಳಮೀಸಲಾತಿ ಜಾರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಒಳಮೀಸಲಾತಿ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಡಾ.ವೈ.ಕೆ.ಬಾಲಕೃಷ್ಣಪ್ಪ ಮಾತನಾಡಿ ಒಳ ಮೀಸಲಾತಿ ಜಾರಿಯಾಗುವವರೆಗೆ ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ಸರ್ಕಾರದ ಜಯಂತಿಗಳನ್ನು ಬಹಿಷ್ಕರಿಸಿ, ಪ್ರತ್ಯೇಕವಾಗಿ ಸಮುದಾಯದಿಂದಲೇ ಜಯಂತಿ ಆಚರಣೆಗೆ ಮುಂದಾಗುವಂತೆ ಕರೆ ನೀಡಿದರು.

ಈ ವೇಳೆ ಗಂಗಾಧರ್, ಕೇಬಲ್ ರಘು, ಟಿ.ಸಿ.ರಾಮಯ್ಯ,ರಂಜನ್, ಯೋಗೀಶ್ ಸೋರೆಕುಂಟೆ, ಬಿ.ಜಿ.ಸಾಗರ್, ಸಿದ್ದೇಶ್, ನಿಟ್ಟೂರು ರಂಗಸ್ವಾಮಿ, ಕೊಡಿಯಾಲ ಮಹಾದೇವ್, ನಾಗರಾಜು ಗೂಳಹರಿವೆ, ಶ್ರೀನಿವಾಸ್ ಅಯ್ಯನಪಾಳ್ಯ, ಕಿರಣ್, ಕ್ಯಾತ್ಸಂದ್ರ ಮೂರ್ತಿ, ರಾಮಾಂಜಿನಪ್ಪ, ದಂಡು ಕುಮಾರ್, ಜೆಡಿಎಸ್ ಚಂದ್ರಣ್ಣ, ಸಾಕ್ಷರತಾ ರಾಜಣ್ಣ ಸೇರಿದಂತೆ ಇತರರಿದ್ದರು.

## ಎ.8 ರ ಜನಸ್ಪಂದನ ಸಭೆಯಲ್ಲಿ ಗರಿಷ್ಠ ಪರಿಹಾರಗಳು: ಡಿಸಿ ವಿಶ್ವಾಸ



ತುಮಕೂರು: ಏ.8ರಂದು ನಡೆಯಲಿರುವ ಜನ ಸ್ಪಂದನ ಸಭೆಯಲ್ಲಿ ಗರಿಷ್ಠ ಮಟ್ಟದ ಪರಿಹಾರಗಳು ಸಿಗಲಿವೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರ ಕೇಂದ್ರ ಗ್ರಂಥಾಲಯದಲ್ಲಿ ಶುಕ್ರವಾರ ಏಪ್ರಿಲ್ 8 ರಂದು ನಡೆಯಲಿರುವ ಜನ ಸ್ಪಂದನ ಕಾರ್ಯಕ್ರಮಕ್ಕಾಗಿ ಪೂರ್ವ ಸಿದ್ಧತೆಪರಿಶೀಲನೆ ನಡೆಸಿದ ಅವರು, ಅಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ಜನಸ್ಪಂದನ ಸಭೆ ನಡೆಯಲಿದೆ ಎಂದರು. ಈ ವರೆಗೆ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಜನಸಂಪರ್ಕ ಸಭೆಯನ್ನು ಮಾಡಲಾಗಿದೆ. ಕಂದಾಯ, ಪಂಚಾಯತ್ ರಾಜ್ ಇಲಾಖೆ, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಂಬಂಧಿಸಿದ ಅಹವಾಲುಗಳನ್ನು ಸಾರ್ವಜನಿಕರು ನೀಡಿದ್ದಾರೆ. ಕೆಲವು ಪ್ರಕರಣಗಳಲ್ಲಿ ಸ್ಥಳದಲ್ಲೆ ಪರಿಹಾರಗಳನ್ನು ನೀಡಲಾಗಿದೆ. ಕೆಲವು ಕಾಲಮಿತಿಯಲ್ಲಿ ಮಾಡ ಬೇಕಾಗುತ್ತದೆ. ಅಂತಹ ಪ್ರಕರಣಗಳಲ್ಲಿ ಈಗಾಗಲೆ ಕೆಲವು ಬಗೆಹರಿದಿವೆ. ಈ ಪೈಕಿ ಕಲವು ಫಲಾನುಭವಿಗಳನ್ನು ಈ ಕಾರ್ಯಕ್ರಮಕ್ಕೆ ಕರೆತರುವಂತೆ ಆಯಾ ತಾಲೂಕು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.ಜಿಲ್ಲಾದ್ಯಂತ ಸುಮಾರು 2500 ಅಹವಾಲುಗಳು ಬಂದಿದ್ದು ಈ ಕಾರ್ಯಕ್ರಮದಲ್ಲಿ ಶೇ.15ರಷ್ಟಾದರೂ ಪರಿಹಾರ ನೋಡಬೇಕೆಂಬ ಉದ್ದೇಶವಿದೆ ಎಂದರು. ಸಾರ್ವಜನಿಕರು ಏ.8ರಂದು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ಗಮ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳಬಹುದು. ಈ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಮಳಿಗೆಗಳನ್ನು ತೆರೆಯಲಾಗುವುದು. ಐಪಿಜಿಆರ್ ಎಸ್ ಸೌಲಭ್ಯ ಮಾಡಲಾಗಿದೆ. ಅಲ್ಲದೆ ಸಾರ್ವಜನಿಕರಿಗೆ ಕೇಂದ್ರ ಗ್ರಂಥಾಲಯದ ತಳಮಹಡಿಯಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್ ತಿಪ್ಪೇಸ್ವಾಮಿ, ಮಹಾನಗರ ಪಾಲಿಕೆ ಆಯುಕ್ತೆ ಬಿ.ಶುಭ ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

## ವಿಶೇಷ ಮನವಿ



ಎಲ್ಲೆಡೆ ಈಗಾಗಲೇ ಬೇಸಿಗೆ ಆರಂಭವಾಗಿದ್ದು ಪ್ರಾಣಿ, ಪಕ್ಷೀಗಳು ನೀರಿನ ದಾಹದಿಂದ ಬಳಲುತ್ತಿರುತ್ತವೆ ಹಾಗಾಗಿ ಸಮಸ್ತ ನಾಡಿನ ಎಲ್ಲಾ ಜನರಲ್ಲಿ ಒಂದುವಿನಂತಿ ನಿಮ್ಮ ಮನೆ ಮೇಲೆ ಅಕ್ಕ-ಪಕ್ಕ ಪ್ರಾಣಿ ಪಕ್ಷೀಗಳು ಬರುವ ಕಡೆಗಳಲ್ಲಿ ತೆರೆದ ಡಬ್ಬಿಗಳಲ್ಲಿ ನೀರನ್ನ ಇಟ್ಟು ಪುಣ್ಯ ಕಟ್ಟಿಕೊಳ್ಳಿ



-ಸಂಪಾದಕರು.

## ಯುದ್ಧದ ನೆಪ ಮಾಡಿ ಗ್ರಾಹಕರಿಂದ ಗ್ಯಾಸ್ ಏಜೆನ್ಸಿಗಳ ವಸೂಲಿ ಕಡಿವಾಣಕ್ಕೆ ರೈತ ಸಂಘ ಆಗ್ರಹ






ತುಮಕೂರು: ಮಧ್ಯ ಪ್ರಾಚ್ಯ ಸಂಘರ್ಷವನ್ನು ನೆಪ ಮಾಡಿ ಕೊಂಡು ಅಡುಗೆ ಅನಿಲ ಸರಬರಾಜು ಏಜೆನ್ಸಿಗಳು ಜನರಿಂದ ಹೆಚ್ಚಿನ ಹಣ ವಸೂಲಿ ಮಾಡುವ ಮೂಲಕ ಸುಲಿಗೆ ಮಾಡುತಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ತುಮಕೂರು ತಾಲೂಕು ಅಧ್ಯಕ್ಷ ಚಿಕ್ಕಬೋರೇಗೌಡ ಆರೋಪಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಜಿಲ್ಲೆಯಲ್ಲಿ ಮನೆ ಬಳಕೆಯ ಗ್ಯಾಸ್ ಸಿಲಿಂಡರ್ ಸರಬರಾಜು ಮಾಡುತ್ತಿರುವ ಹೆಚ್.ಪಿ, ಇಂಡಿಯನ್,



ಭಾರತ್‌ಗ್ಯಾಸ್ ಏಜೆನ್ಸಿಗಳು ಒಂದು ಮನೆಯ ಬಳಕೆಯ ಅಡುಗೆ ಅನಿಲ ಸಿಲಿಂಡರ್‌ಗೆ ಸರಕಾರ ನಿಗಧಿ ಪಡಿಸಿರುವ 923 ರೂಗಳಿಗೆ 1 100 ರೂಗಳನ್ನು ಪಡೆಯುತ್ತಿದ್ದಾರೆ. ಸಿಲಿಂಡರ್ ಬುಕ್ ಮಾಡಿ 10-15 ದಿನಗಳು ಕಳೆದರೂ ಗ್ರಾಹಕರಿಗೆ ಸಿಲಿಂಡರ್ ಸರಬರಾಜು ಮಾಡದೆ, ಕೃತಕ ಅಭಾವ ಸೃಷ್ಟಿಸಿರುವುದಲ್ಲದೆ, ಕೆಲ ಹಂಚಿಕೆದಾರರು ಗ್ರಾಹರಿಂದ ಡಿಎಸಿ / ಓಟಿಪಿ ಪಡೆದು ಸಿಲಿಂಡರ್ ವಿತರಿಸದೆ ಬೇರೆಯವರಿಗೆ ಹೆಚ್ಚಿನ ಹಣಕ್ಕೆ ಮಾರಿಕೊಳ್ಳುತ್ತಿರುವ ಪ್ರಕರಣ ಹೆಚ್ಚಿವೆ. ಗ್ರಾಹಕರ ಮೊಬೈಲ್‌ಗಳಿಗೆ ಸಿಲಿಂಡರ್ ಡೆಲವರಿಯಾಗಿರುವ ಮೆಸೇಜ್ ಬಂದಿದೆ. ಆದರೆ ಸಿಲಿಂಡರ್ ಮನೆ ಬಂದಿಲ್ಲ. ಗ್ಯಾಸ ಏಜೆನ್ಸಿಗಳು ಈ ಕಳ್ಳಾಟಕ್ಕೆ ಜಿಲ್ಲಾಡಳಿತ, ಜಿಲ್ಲಾ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುವುದಲ್ಲದೆ, ಸಿಲಿಂಡರ್‌ನ್ನು ಐದು ಕಿ.ಮಿ.ಒಳಗೆ ಇದ್ದರೆ ಉಚಿತವಾಗಿ ಸರಬರಾಜು ಮಾಡಬೇಕೆಂಬ ನಿಯಮವಿದ್ದರೂ ಗ್ರಾಹಕರಿಂದ ಮನಸೋ ಇಚ್ಚೆ ಹಣ ಪಡೆದು, ಶೋಷಣೆ ಮಾಡುತ್ತಿದ್ದು, ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ ಸಂಘದ ತುಮಕೂರು ತಾಲೂಕು ಅಧ್ಯಕ್ಷ ಚಿಕ್ಕಬೋರೇಗೌಡ ತಿಳಿಸಿದ್ದಾರೆ.

## ಸ್ವಯಂ ಗಣತಿಯಲ್ಲಿ ಭಾಗವಹಿಸಿ ಅಭಿವೃದ್ಧಿಗೆ ಕೈಜೋಡಿಸಿ

ತುಮಕೂರು: ಏಪ್ರಿಲ್ 1ರಿಂದ ಆರಂಭವಾಗಿರುವ ಸ್ವಯಂ ಗಣತಿಯಲ್ಲಿ ಸಾರ್ವಜನಿಕರು ಭಾಗವಹಿಸುವ ಮೂಲಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ್ ಕರೆ ನೀಡಿದ್ದಾರೆ.

ತುಮಕೂರು ನಗರದ ವಿವಿಧ ಬಡಾವಣೆಗಳಿಗೆ ಗುರುವಾರ ಅಧಿಕಾರಿಗಳೊಂದಿಗೆ ಭೇಟಿ ನೀಡಿದ ಅವರು ಮೊಬೈಲ್ ಮೂಲಕ ನಾಗರಿಕರು ಸ್ವಯಂ ಗಣತಿ ಮಾಡುವುದು ಹೇಗೆ ಎಂಬುದನ್ನು ಖುದ್ದು ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರತಿ ಹತ್ತು ವರ್ಷಗಳಿಗೊಮ್ಮೆ ಭಾರತ ಸರ್ಕಾರ ಜನಗಣತಿ ಮಾಡುತ್ತದೆ. ಅಂತೆಯೇ ಇದೀಗ 2027ರ ಜನಗಣತಿ ಏಪ್ರಿಲ್ 1ರಿಂದ ಆರಂಭವಾಗಿದ್ದು ಏಪ್ರಿಲ್ 15ರವರೆಗೆ ಸ್ವಯಂ ಗಣತಿ ನಂತರ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಗಣತಿ ಕಾರ್ಯ ಮಾಡಲಿದ್ದಾರೆ ಎಂದರು. ದೇಶದ ಅಭಿವೃದ್ಧಿ ದೃಷ್ಟಿಯಿಂದ ಗಣತಿ ಕಾರ್ಯ ಪ್ರಮುಖ ಪಾತ್ರವಿದೆ ಎಂದ ಅವರು ದೇಶದ ಜನಸಂಖ್ಯೆ ಮಾಹಿತಿ ಪಡೆದು ಅದಕ್ಕನುಗುಣವಾಗಿ ಜನರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಗಳಿಗನುಸಾರ ನೀತಿಗಳನ್ನು ರೂಪಿಸಲು ಗಣತಿ ಅಂಕಿ ಅಂಶಗಳು ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ದೇಶದ ಎಲ್ಲ ಜನರು ಜನಗಣತಿಯಲ್ಲಿ ಪಾಲ್ಗೊಳಬೇಕಿದೆ ಎಂದರು.

ಪ್ರಸ್ತುತ ಏಪ್ರಿಲ್ 1ರಿಂದ 15ರವರೆಗೆ ಸ್ವಯಂ ಗಣತಿ ಆರಂಭವಾಗಿದ್ದು ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕ ವಿವರಗಳನ್ನು ದಾಖಲಿಸಬೇಕಿದೆ. ಈ ದಾಖಲೆಗಳು ಅತ್ಯಂತ ಗೌಪ್ಯವಾಗಿರಿಸಲಾಗುವುದು ಮತ್ತು ಇದು ಸರ್ಕಾರದ ಯೋಜನಗಳ ರೂಪಿಸುವ ಉದ್ದೇಶಕ್ಕೆ ಮಾತ್ರ ಬಳಕೆ ಆಗಲಿದೆ ಎಂದರು.

ತಮ್ಮ ಮೊಬೂಲ್ ನಲ್ಲಿ https://S e.census.gov.in ಈ ಲಿಂಕನ್ನು ತೆರೆದು ಅಲ್ಲಿ ತಮ್ಮ ಕುಟುಂಬ ಮುಖ್ಯಸ್ಥರು ವಿವರಗಳನ್ನು ದಾಖಲಿಸಬೇಕಿದೆ. ಕೇವಲ 33 ಪ್ರಶ್ನೆಗಳಿಗೆ 3 ನಿಮಿಷದಲ್ಲಿ ಉತ್ತರಿಸಿ ಗಣತಿ ಕಾರ್ಯವನ್ನು ಸುಲಭವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಬಹುದು ಎಂದರು.

ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಒಂದು ಐಡಿ ನಂಬರ್ ಬರುತ್ತದೆ ಅದನ್ನು ಸ್ಕ್ರೀನ್ ಷಾಟ್ ತೆಗೆದಿಟ್ಟುಕೊಂಡು ಏಪ್ರಿಲ್16ರಿಂದ ಗಣತಿದಾರರು ಮನೆ ಮನೆಗೆ ಗಣತಿಗಾಗಿ ಆಗಮಿಸಿದಾಗ ಈ ಐಡಿ ನಂಬರನ್ನು ತೋರಿಸಿದಲ್ಲಿ ಅದನ್ನು ಒಮ್ಮೆ ಪರಿಶೀಲಿಸಿ ಆಗಿದೆ ಎಂದು ನಮೂದಿಸಿಕೊಳ್ಳುತ್ತಾರೆ. ಈಗ ಮಾಡಿಲ್ಲದವರು ಗಣತಿದಾರರಿಗೆ ಮಾಹಿತಿ ನೀಡಬೇಕಾಗುತ್ತದೆ ಎಂದು ಅವರು ತಿಳಿಸಿದರು. 1 872ರಲ್ಲಿ ದೇಶದಲ್ಲಿ ಮೊದಲ ಜನಗಣತಿ ಮಾಡಲಾಗಿದ್ದು ಆ ನಂತರ ಪ್ರತಿ ಹತ್ತು ವರ್ಷಗಳಿಗೊಮ್ಮೆ ಮಾಡಲಾಗುತ್ತದೆ. ಅಲ್ಲದೆ 1 948ರ ಗಣತಿ ಕಾಯ್ದೆಯಂತೆ ಈ ಪ್ರಕ್ರಿಯೆ ನಡೆಯಲಿದ್ದು ಸಾರ್ವಜನಿಕರು ಸಹಕರಿಸಬೇಕು ಹಾಗೂ ಗಣತಿ ಕಾರ್ಯದಲ್ಲಿ ಪಾಲ್ಗೊಳ್ಳಬೇಕು ಎಂದರು.

ತುಮಕೂರು ಮಹಾನಗರ ಪಾಲಿಕೆ ಆಯುಕ್ತೆ ಶುಭ ಬಿ. ಮಾತನಾಡಿ, ಏಪ್ರಿಲ್ 1ರಿಂದ ತಮ್ಮ ಸಿಬ್ಬಂದಿ ಗಣತಿ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಏಪ್ರಿಲ್ 16ರಿಂದ ಗಣತಿದಾರರು ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಐಡಿ ಕಾರ್ಡಿನೊಂದಿ ಅವರು ಬರಲಿದ್ದಾರೆ ಅದನ್ನು ಪರಿಶೀಲಿಸಿ ಸಾರ್ವಜನಿಕರು ಗಣತಿಗೆ ಮಾಹಿತಿ ನೀಡಬೇಕು ಎಂದರು. ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ಪಾವಗಡ: ಬ್ರ್ಯಾಂಡೆಡ್ ಚೀಲಗಳಲ್ಲಿ ಕಳಪೆ ಅಕ್ಕಿ ಹಾವಳಿ – ಗ್ರಾಹಕರಿಗೆ ಭಾರೀ ವಂಚನೆ



ಪಾವಗಡ: ತಾಲೂಕಿನಾದ್ಯಂತ ಸಾರ್ವಜನಿಕರು ದಿನನಿತ್ಯ ಬಳಸುವ ಅನ್ನದ ಬಟ್ಟಲಿಗೆ ಇದೀಗ ಕಲಬೆರಕೆಯ ವಿಷ ಉಣಿಸುವ ಕೆಲಸವಾಗುತ್ತಿದೆ. ಪಾವಗಡ ಪಟ್ಟಣ ಸೇರಿದಂತೆ ವಿವಿಧ ಗ್ರಾಮಗಳ ಕೆಲವು ದಿನಸಿ ಅಂಗಡಿಗಳು ಮತ್ತು ಹೋಲ್‌ಸೇಲ್ ವ್ಯಾಪಾರಿಗಳು ಲಾಭದ ಆಸೆಗೆ ಬಿದ್ದು ಗ್ರಾಹಕರ ನಂಬಿಕೆಗೆ ದ್ರೋಹ ಬಗೆಯುತ್ತಿದ್ದಾರೆ ಎಂದು ಸಾರ್ವಜನಿಕರ ವಲಯದಲ್ಲಿ ಆರೋಪಗಳು ಕೇಳಿ ಬರುತ್ತಿವೆ.

**ನಡೆಯುತ್ತಿರುವುದೇನು?**

ಕೆಲವು ಕಿಡಿಗೇಡಿ ವರ್ತಕರು ಹೆಸರಾಂತ ಕಂಪನಿಗಳ ಖಾಲಿ ಚೀಲಗಳನ್ನು ಸಂಗ್ರಹಿಸಿ, ಅವುಗಳಲ್ಲಿ ಅತಿ ಕಡಿಮೆ ಬೆಲೆಯ ಕಳಪೆ ಗುಣಮಟ್ಟದ ಅಕ್ಕಿಯನ್ನು ತುಂಬಿ, ಹೆಸರಾಂತ ಬ್ರ್ಯಾಂಡ್ ಹೆಸರಿನಲ್ಲಿ ದುಬಾರಿ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದಾಗಿ ಸಾವಿರಾರು ರೂಪಾಯಿ ನೀಡಿ ಅಕ್ಕಿ ಖರೀದಿಸುವ ಜನಸಾಮಾನ್ಯರಿಗೆ ಗುಣಮಟ್ಟದ ಅಕ್ಕಿ ಸಿಗದೆ ಮೋಸ ಹೋಗುತ್ತಿದ್ದಾರೆ. ಕಳಪೆ ಗುಣಮಟ್ಟದ ಮತ್ತು ಕೆಮಿಕಲ್ ಬಳಸಿ ಪಾಲಿಶ್ ಮಾಡಿದ ಅಕ್ಕಿಯನ್ನು ತಿನ್ನುವುದರಿಂದ ಮಕ್ಕಳ ಮತ್ತು ವಯೋವೃದ್ಧರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಬೇಯಿಸಿದಾಗ ಅಕ್ಕಿ ಸರಿಯಾಗಿ ಅರಳುವುದಿಲ್ಲ, ಅತಿ ಬೇಗನೆ ಹಾಳಾಗುತ್ತದೆ ಮತ್ತು ವಿಚಿತ್ರ ವಾಸನೆ ಬರುತ್ತದೆ ಎಂದು ಗೃಹಿಣಿಯರು ಅಳಲು ತೋಡಿಕೊಂಪರಿಶೀಲಿ ಗಸಿ.

**ಸಾರ್ವಜನಿಕರ ದೂರುಗಳು:**

ಗುಣಮಟ್ಟದ ಕೊರತೆ: ಬೇಯಿಸಿದಾಗ ಅಕ್ಕಿ ಸರಿಯಾಗಿ ಅರಳುವುದಿಲ್ಲ, ಅತಿ ಬೇಗನೆ ಹಾಳಾಗುತ್ತದೆ ಮತ್ತು ವಿಚಿತ್ರ ವಾಸನೆ ಬರುತ್ತದೆ ಎಂದು ಸಾರ್ವಜನಿಕರು ದೂರಿದ್ದಾರೆ.

**ಬೆಲೆ ಸಮರ:** ಬ್ರ್ಯಾಂಡೆಡ್ ಹೆಸರಿನಲ್ಲಿ ಮಾರಾಟ ಮಾಡುವುದರಿಂದ ಗ್ರಾಹಕರು ಅನುಮಾನ ಪಡದೆ ಕೇಳಿದಷ್ಟು ಹಣ ನೀಡುತ್ತಿದ್ದಾರೆ.

ಆರೋಗ್ಯದ ಮೇಲೆ ಪರಿಣಾಮ: ಕಳಪೆ ಗುಣಮಟ್ಟದ ಮತ್ತು ಪಾಲಿಶ್ ಮಾಡಿದ ಹಳೆಯ ಅಕ್ಕಿಯನ್ನು ತಿನ್ನುವುದರಿಂದ ಮಕ್ಕಳ ಮತ್ತು ವಯೋವೃದ್ಧರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

**ಅಧಿಕಾರಿಗಳ ಗಮನಕ್ಕೆ:**

ಈ ಕೂಡಲೇ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹಾಗೂ ತಾಲೂಕು ಆಡಳಿತವು ಎಚ್ಚೆತ್ತುಕೊಳ್ಳಬೇಕಿದೆ. ಪಟ್ಟಣದ ಗೋಡೌನ್‌ಗಳು ಮತ್ತು ದಿನಸಿ ಅಂಗಡಿಗಳ ಮೇಲೆ ಅನಿರೀಕ್ಷಿತ ದಾಳಿ ನಡೆಸಿ, ಅಕ್ಕಿಯ ಗುಣಮಟ್ಟವನ್ನು ಪರೀಕ್ಷಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಈ ಬಗ್ಗೆ ಸಾರ್ವಜನಿಕರು ಹಲವಾರು ಬಾರಿ ಸಂಬಂಧಪಟ್ಟ ಇಲಾಖೆಗಳಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂಬುದು ಜನರ ಆಕ್ರೋಶಕ್ಕೆ ಕಾರಣವಾಗಿದೆ. "ನಾವು ದೂರು ನೀಡಿದಾಗ ಅಧಿಕಾರಿಗಳು ಬಂದು ಕೇವಲ ಕಣ್ಣೊರೆಸುವ ತಂತ್ರ ಮಾಡುತ್ತಾರೆ. ಪ್ರಭಾವಿ ವರ್ತಕರ ಜೊತೆ ಅಧಿಕಾರಿಗಳು ಶಾಮೀಲಾಗಿದ್ದು, ಪ್ರಕರಣವನ್ನು ಮುಚ್ಚಿ ಹಾಕುತ್ತಿದ್ದಾರೆ" ಎಂಬ ಗಂಭೀರ ಆರೋಪ ಕೇಳಿಬರುತ್ತಿದೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಮೌನವು ಈ ವಂಚಕರಿಗೆ ಮತ್ತಷ್ಟು ಧೈರ್ಯ ನೀಡಿದಂತಿದೆ.ಗ್ರಾಹಕರಿಗೆ ಎಚ್ಚರಿಕೆ: ಅಕ್ಕಿ ಖರೀದಿಸುವಾಗ ಚೀಲದ ಸೀಲ್ (Seal) ಸರಿಯಾಗಿದೆಯೇ ಎಂದು ಗಮನಿಸಿ. ಹೆಸರಾಂತ ಕಂಪನಿಗಳ ಲೋಗೋ ಮತ್ತು ಹೊಲಿಗೆಯನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಗ್ರಾಹಕರು ಕೊಂಡುಕೊಳ್ಳಬೇಕು ಎಂದು ಸಾರ್ವಜನಿಕರ ಮಾತಾಗಿದ್ದೆ.

## ನಿವೃತ್ತಿ ಜೀವನ ಉತ್ಸಾಹದಿಂದ ಕೂಡಿರಲಿ

ಕೊರಟಗೆರೆ ;- ತಮ್ಮ ಸುದೀರ್ಘ 33 ವರ್ಷಗಳ ಸೇವಾ ಅವದಿಯಲ್ಲಿ ಕ್ರೀಯಾಶೀಲರಾಗಿ ನಿಸ್ವಾರ್ಥ ಸೇವೆ ಸಲ್ಲಿಸಿ ತಮ್ಮ ವೃತ್ತಿ ಜೀವನದಲ್ಲಿ ಯಾವುದೇ ಕಳಂಕವಿಲ್ಲದೆ ಕಾರ್ಯ ನಿರ್ವಹಿಸಿ ವಯೋ ನಿವೃತ್ತಿ ಹೊಂದಿದ ವಾಹನ ಚಾಲಕ ಆರ್.ರಘುನಾಥ್‌ರವರ ನಿವೃತ್ತಿ ಜೀವನವು ಉತ್ಸಾಹದಿಂದ ಕೊಡಿರಲಿ ಎಂದು ಮಧುಗಿರಿ ಉಪವಿಭಾಗಾಧಿಕರಿ ಗೋಟೂರು ಶಿವಪ್ಪ ತಿಳಿಸಿದರು.

ಅವರು ತಮ್ಮ ಉಪ ವಿಭಾಗಾಧಿಕಾರಿ ಕಛೇರಿಯಲ್ಲಿ 33 ವರ್ಷಗಳ ಕಾಲ ಸುಧೀರ್ಘ ಸೇವೆ ಸಲ್ಲಿಸಿ ವಯೋ ನಿವೃತ್ತಿ ಹೊಂದುತ್ತಿರುವ ವಾಹನ ಚಾಲಕ ಆರ್.ರಘುನಾಥ್ ರವರಿಗೆ ಕರ್ನಾಟಕ ರಾಜ್ಯ ಜಿಲ್ಲಾ ಸಹಕಾರಿ ನೌಕರರ ಸಂಘ ಮಧುಗಿರಿ ಶಾಖೆ, ಸರ್ಕಾರಿ ವಾಹನ ಚಾಲಕರ ಸಂಘ ಮಧುಗಿರಿ, ಕರ್ನಾಟಕ ರಾಜ್ಯ ಕಂದಾಯ ಇಲಾಖೆ ನೌಕರರ ಸಂಘ, ಗ್ರಾಮ ಆಡಳಿತ ಅಧಿಕಾರಿಗಳ ಸಂಘ ಹಾಗೂ ಇತರ ಜಿಲ್ಲಾ ವೃಂದ ಸಂಘದ ಅಧ್ಯಕ್ಷರು ಹಾಗೂ ಪಧಾಧಿಕಾರಿಗಳು ಮಧುಗಿರಿ ಶಾಖೆ. ಮಧುಗಿರಿ ಉಪ ವಿಭಾಗದ ಸ್ನೇಹ ಬಳಗದ ವತಿಯಂದ ಪಟ್ಟಣದ ಕನ್ನಡ ಭವನದಲ್ಲಿ ಏರ್ಪಡಿಸಿದ್ದ ಹೃದಯ ಸ್ಪರ್ಶಿ ಬೀಳ್ಕೊಡಿಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ ವೃತ್ತಿಯಿಂದ ನಿವೃತ್ತರಾದ ಮಾತ್ರಕ್ಕೆ ಎಲ್ಲವೂ ಮುಗಿದಂತೆ ಅಲ್ಲ ನಿವೃತ್ತಿಯ ನಂತರ ಹೊಸ ಪ್ರವೃತ್ತಿ ಆರಂಭಿಸಿ ಹೊಸ ಬದುಕನ್ನು ರೂಪಿಸಿಕೊಂಡು ಸಾರ್ಥಕವಾಗಿ ಬಾಳಬೇಕು ಎಂದು ತಿಳಿಸಿದರು.

# ವಿವೇಕಾನಂದ ಇಂಟರ್ ನ್ಯಾಷನಲ್ ಶಾಲೆ ವತಿಯಿಂದ ವಿವೇಕ ವೈಭವ – ವಿದ್ಯಾರ್ಥಿಗಳ ಪ್ರತಿಭೆಗೆ ವೇದಿಕೆ



ಹುಳಿಯಾರು : ಸ್ವಾಮಿ ವಿವೇಕಾನಂದ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಕಿಡ್ಜಿ ಹಾಗೂ ವಿವೇಕಾನಂದ ಇಂಟರ್ ನ್ಯಾಷನಲ್ ಶಾಲೆ ವತಿಯಿಂದ ಡಾ. ಶಿವಕುಮಾರ ಸ್ವಾಮೀಜಿಯವರ ಜನ್ಮದಿನದ ಅಂಗವಾಗಿ ಧ್ಯಾನನಗರಿ ಸೇವಾಲಾಲ್ ಸಾಂಸ್ಕೃತಿಕ ಸದನದಲ್ಲಿ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ವಿವೇಕ ವೈಭವ – 6 ಎಂಬ ಹೆಸರಿನಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.
ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಎನ್. ಚಕ್ರವರ್ತಿ ರವರು ಮಾತನಾಡಿ ಇಂದಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಬಳಕೆಗೆ ಹೆಚ್ಚು ಅವಲಂಬಿತರಾಗುತ್ತಿರುವುದು ಅವರ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಹಾನಿಕಾರಕವಾಗಿದೆ ಎಂದು ಹೇಳಿದರು. ಮಕ್ಕಳನ್ನು ಹೊರಾಂಗಣ ಆಟಗಳಲ್ಲಿ ತೊಡಗಿಸುವುದು ಹಾಗೂ ಸ್ನೇಹಿತರೊಂದಿಗೆ ಸಮಯ ಕಳೆಯಲು ಅವಕಾಶ ನೀಡುವುದು ಮಾನಸಿಕ ಆರೋಗ್ಯಕ್ಕೆ ಸಹಾಯಕವಾಗುತ್ತದೆ ಎಂದು ಅಭಿಪ್ರಾಯಪಟ್ಟರು.
ಸಂಸ್ಥೆಯ ಅಧ್ಯಕ್ಷ ಜಿ. ಎಚ್ ಅಶೋಕ್ ಮೂರ್ತಿ ಮಾತನಾಡಿ, ಪೋಷಕರು ಮಕ್ಕಳ ಬಗ್ಗೆ ದೊಡ್ಡ ಕನಸುಗಳನ್ನು ಕಾಣಬೇಕು ಮತ್ತು ಅದನ್ನು ಸಾಕಾರಗೊಳಿಸಲು ಪ್ರಾಮಾಣಿಕ ಪ್ರಯತ್ನ ಅಗತ್ಯವೆಂದು ತಿಳಿಸಿದರು. ಶಾಲೆಯ ನಿಯಮಗಳು ಹಾಗೂ ಉತ್ತಮ ಆಹಾರ ಪದ್ಧತಿ ಬಗ್ಗೆ ಪೋಷಕರಿಗೆ ಮಾರ್ಗದರ್ಶನ ನೀಡಿದರು.
ಕೊನೆಯಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಜ್ಞಾನಪ್ರಭುಸಿದ್ಧರಾಮ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ ಮಕ್ಕಳನ್ನು ಪ್ರೋತ್ಸಾಹಿಸುವುದು ಅತ್ಯಂತ ಮುಖ್ಯವೆಂದು ತಿಳಿಸಿದರು. ಗ್ರಾಮೀಣ ಪ್ರದೇಶದಲ್ಲಿ ಇಂತಹ ಉತ್ತಮ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿರುವುದಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು.
ಇದೇ ಸಂದರ್ಭದಲ್ಲಿ ಶ್ರೀ ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಜನ್ಮದಿನದ ಶುಭಾಶಯ ಕೋರಲಾಯಿತು. ಮುಖ್ಯಶಿಕ್ಷಕ ಪ್ರದೀಪ್ ಎಸ್. ಆರ್ ಅವರು ವಾರ್ಷಿಕ ವರದಿ ಮಂಡಿಸಿ, ಶಾಲೆಯಲ್ಲಿ ಕೈಗೊಂಡ ಸಹಪಠ್ಯ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಉತ್ತಮ ಬದಲಾವಣೆ ತಂದಿದ್ದು, ವಿಶೇಷವಾಗಿ ಕೈಬರಹದ ಕೌಶಲ್ಯದಲ್ಲಿ ಪ್ರಗತಿ ಕಂಡುಬಂದಿದೆ ಎಂದು ತಿಳಿಸಿದ ಅವರು. ಇದಕ್ಕೆ ಪೋಷಕರಿಂದ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎಂದರು.
ಕಾರ್ಯಕ್ರಮದಲ್ಲಿ ಶಾಲೆಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕ್ಲಸ್ಟರ್ ಹಾಗೂ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ವೇದಿಕೆಯಲ್ಲಿ ಸನ್ಮಾನಿಸಿ, ಟ್ರೋಫಿ ನೀಡಿ ಗೌರವಿಸಲಾಯಿತು.
ಈ ಸಂದರ್ಭದಲ್ಲಿ ಸಂಸ್ಥೆಯ ಸದಸ್ಯರಾದ ರವಿಪ್ರಕಾಶ್, ಸಂಯೋಜಕಿ ಪ್ರೇಮಲತಾ, ಶಿಕ್ಷಕರು, ಸಿಬ್ಬಂದಿವರ್ಗದವರು ಪೋಷಕರು ಹಾಜರಿದ್ದರು. ವೇದಿಕೆ ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ನೃತ್ಯ, ನಾಟಕ ಮತ್ತು ಹಾಸ್ಯ ಕಾರ್ಯಕ್ರಮಗಳು ಎಲ್ಲರ ಮನಸೆಳೆದವು.

# ತುಮಕೂರು ಜಿಲ್ಲಾ ವರದಿಗಾರ

## ಮಂಜು ಸ್ವಾಮಿಗೆ ಉತ್ತಮ ವರದಿಗಾರ ಪ್ರಶಸ್ತಿ



ತುಮಕೂರು : ಕಾಯಕ ಯೋಗಿ ಪ್ರಾದೇಶಿಕ ದಿನ ಪತ್ರಿಕೆಯ 9ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ವರದಿಗಾರರಿಗೆ 2026–27 ನೇ ಸಾಲಿನ ಗುರುತಿನ ಚೀಟಿ (ಐ ಡಿ ಕಾರ್ಡ್) ಮತ್ತು ವರದಿಗಾರರ ನೇಮಕಾತಿ ಆದೇಶ ಪತ್ರ ವಿತರಣೆ ಸಮಾರಂಭವು ಸಾಂಸ್ಕೃತಿಕ ನಗರಿ ಮೈಸೂರಿನ ಪಿಡಬ್ಲ್ಯೂಡಿ ಗೆಸ್ಟ್ ಹೌಸ್ ನಲ್ಲಿ ಆಯೋಜನೆ ಮಾಡಲಾಗಿತ್ತು.
ತುಮಕೂರು ಜಿಲ್ಲಾ ವರದಿಗಾರರಾದ ಮಂಜುಸ್ವಾಮಿ ಎಂ ಎನ್ ಅವರ ಉತ್ತಮ ವರದಿಗಾರಿಕೆಗೆ "ಕಾಯಕ ಯೋಗಿ ಪ್ರಾದೇಶಿಕ ದಿನ ಪತ್ರಿಕೆ"ಯ ಸಂಪಾದಕರಾದ ಬಿ ಕೆ ಅರುಣ ಜ್ಯೋತಿಯವರು ದ್ವಿತೀಯ ಪ್ರಶಸ್ತಿ ಪ್ರಕಟ ಮಾಡಿ ನಗದು ಬಹುಮಾನ ನೀಡಿ ಗೌರವಿಸಿದ್ದಾರೆ.
2025–26 ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯ ಸಮಗ್ರ ಅಭಿವೃದ್ಧಿ, ಸ್ಥಳೀಯ ಸರ್ಕಾರಿ ಇಲಾಖೆಗಳ ಕಾರ್ಯ ವೈಖರಿ, ಜನೋಪಯೋಗಿ ವರದಿ, ಜಿಲ್ಲೆಯಲ್ಲಿನ ಕುಂದು ಕೊರತೆಗಳ ಬಗ್ಗೆ, ಗ್ರಾಮಿಣ ಭಾಗದ ಅಭಿವೃದ್ಧಿ ಮತ್ತು ಅನಾನುಕೂಲಗಳ ಬಗ್ಗೆ ವಿಶೇಷ ಆಸಕ್ತಿವಹಿಸಿ ಸುದ್ದಿಗಳನ್ನು ಮಾಡಿದ್ದರು. ಸಾಮಾಜಿಕ ಶೈಕ್ಷಣಿಕ ಮಾನವೀಯತೆ ಸುದ್ದಿಗಳನ್ನು ಆದರಿಸಿ "ಕಾಯಕ ಯೋಗಿ ಉತ್ತಮ ವರದಿಗಾರ" (ದ್ವಿತೀಯ ಸ್ಥಾನ) ಎಂದು ಘೋಷಣೆ ಮಾಡಿ ಪ್ರಶಸ್ತಿಯೊಂದಿಗೆ ನಗದು ಬಹುಮಾನ ನೀಡಿ ಗೌರವಿಸಲಾಯಿತು.
ಇನ್ನು ಈ ಸಂದರ್ಭದಲ್ಲಿ ಕಾಯಕ ಯೋಗಿ ಕುಟುಂಬದ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ವರದಿಗಾರರು ಮಂಜುಸ್ವಾಮಿ ಎಂ ಎನ್ ಅವರಿಗೆ ಅಭಿನಂದನೆ ತಿಳಿಸಿದ್ದಾರೆ..

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ನಂದಗೋಕುಲ ಸೇವಾ ಟ್ರಸ್ಟ್‌ನ 60 ಹಸುಗಳಿಗೆ ಜಪಾನಂದ ಮಹಾರಾಜ್ ನೇತೃತ್ವದಲ್ಲಿ ಮೇವು ವಿತರಣೆ




ಮಧುಗಿರಿ : ಪಾವಗಡ ಶ್ರೀ ರಾಮಕೃಷ್ಣ ಆಶ್ರಮದ ವತಿಯಿಂದ ಮೇವು ವಿತರಣಾ ಯೋಜನೆಯಡಿಯಲ್ಲಿ ಮಧುಗಿರಿ ಪಟ್ಟಣದ ಸಿದ್ದಾಪುರ ಗೇಟ್ ಬಳಿ ಇರುವ ಶ್ರೀ ನಂದಗೋಕುಲ ಸೇವಾ ಟ್ರಸ್ಟ್ ನ ಸಿದ್ದಾಪುರ ಗೇಟ್ ಮತ್ತು ಗೊಲ್ಲರಹಟ್ಟಿಯ ಸುಮಾರು 60 ಹಸುಗಳಿಗೆ ಪಾವಗಡ ಶ್ರೀ ರಾಮಕೃಷ್ಣ ಆಶ್ರಮದ ಸ್ವಾಮಿ ಜಪಾನಂದ ಮಹಾರಾಜ್ ರವರ ನೇತೃತ್ವದಲ್ಲಿ ಮೇವನ್ನು ಒದಗಿಸಲಾಯಿತು.
ಸಂಸ್ಥೆಯ ಪರವಾಗಿ ಸತ್ಯನಾರಾಯಣ ಶಾಸ್ತ್ರಿ, ಸ್ವೀಕರಿಸಿ ಮಾತನಾಡಿ, ಈ ಬಾರಿ ಭಯಂಕರ ಬಿಸಿಲಿನ ತಾಪ ಹೆಚ್ಚಾಗಿದ್ದು, ಎಲ್ಲಿಯೂ ಮೇವು ಸಿಗದೆ ಗೋವುಗಳು ಪರಿತಪಿಸುತ್ತಿರುವ ಸ್ಥಿತಿಯನ್ನು ಕಂಡು ನಂದಗೋಕುಲ ಗೋಶಾಲೆಯಲ್ಲಿ ಕಾರ್ಯನಿರ್ವಹಿಸುವ ಗೋಪಾಲಕರೆಲ್ಲರೂ ತಮ್ಮ ಅಳಲನ್ನು ಸ್ವಾಮಿ ಜಪಾನಂದಜೀ ರವರಲ್ಲಿ ತೋಡಿಕೊಂಡರು. ತಕ್ಷಣ ಸ್ಪಂದಿಸಿದ ಸ್ವಾಮಿ ಜಪಾನಂದಜೀ ರವರು ಒಂದು ಲೋಡು (ಕ್ಯಾಂಟರ್) ಮೇವನ್ನು ನೀಡಿದ್ದಾಗಿ ಸ್ಮರಿಸಿದರು.
ಈಗಾಗಲೇ ಕಂಬದೂರು ಹಾಗೂ ಸುತ್ತಮುತ್ತಲಿನ ಗೋಶಾಲೆಗಳಿಗೆ ಮೇವನ್ನು ವಿತರಿಸಲಾಗುತ್ತಿದ್ದು, ಇನ್ನಿತರೆ ಭಾಗದ ಸುಮಾರು 50ಕ್ಕೂ ಮಿಗಿಲಾದ ಹಸುಗಳಿಗೆ ಮೇವು ನೀಡಬೇಕೆಂದು ಗೋಪಾಲಕರು ಬೇಡಿಕೆಯನ್ನಿಟ್ಟಿದ್ದಾರೆ. ಅವರಿಗೂ ಮೇವನ್ನು ಒದಗಿಸಲಾಗುತ್ತದೆ. ಈ ಯೋಜನೆ ಸಾವಿರಾರು ಹಸುಗಳಿಗೆ ಆಪತ್ಕಾಲದ ಪೋಷಕರಂತೆ ಶ್ರೀರಾಮಕೃಷ್ಣ ಸೇವಾಶ್ರಮ ಸ್ಪಂದಿಸುತ್ತಿದ್ದು ನಿಜಕ್ಕೂ ರೈತರುಗಳ, ಗೋಪಾಲಕರ, ಕಿಲಾರಿಗಳ ಪಾಲಿಗೆ ಈ ಸಂಸ್ಥೆ ಮಾತೃ ಹೃದಯದ ವಾತ್ಸಲ್ಯವನ್ನು ನೀಡುತ್ತಿರುವುದು ಶ್ಲಾಘನೀಯ ಎಂದರು.
ಈ ಸಂದರ್ಭದಲ್ಲಿ ಪಾವಗಡ ರಾಮಕೃಷ್ಣ ಆಶ್ರಮದ ಸ್ವಾಮಿ ಜಪಾನಂದ್ ಮಹಾರಾಜ್ ಮತ್ತು ಗೋಶಾಲೆಯ ಸಿಬ್ಬಂದಿ ಇದ್ದರು.

# ವೈದ್ಯಕೀಯ ಪ್ರಯೋಗಾಲಯ ತಂತ್ರಜ್ಞರ ರಾಷ್ಟ್ರೀಯ ಸಮ್ಮೇಳನದಲ್ಲಿ ವಿದ್ಯಾವಾಹಿನಿ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳ ಸಾಧನೆ



ಬೆಂಗಳೂರು: ಕರ್ನಾಟಕ ರಾಜ್ಯ ವೈದ್ಯಕೀಯ ಲ್ಯಾಬ್ ತಂತ್ರಜ್ಞರ ಸಂಘದ ವತಿಯಿಂದ ಆಯೋಜಿಸಲಾದ "ಏಖಒಏಖಿಂಅಔಓ–2026" ವೈದ್ಯಕೀಯ ಲ್ಯಾಬ್ ತಂತ್ರಜ್ಞರ ಸಮ್ಮೇಳನ ಹಾಗೂ ವೈಜ್ಞಾನಿಕ ಕಾರ್ಯಾಗಾರವು ದಿನಾಂಕ 29–03–2026 ರಂದು ಬೆಂಗಳೂರಿನ ಕಿಮ್ಸ್ ಆಸ್ಪತ್ರೆ ಆವರಣದಲ್ಲಿರುವ ಕುವೆಂಪು ಕಲಾ ಕ್ಷೇತ್ರದಲ್ಲಿ ವಿಜೃಂಭಣೆಯಿಂದ ನಡೆಯಿತು.
ಈ ಸಮ್ಮೇಳನದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಬಂದ ವೈದ್ಯಕೀಯ ತಂತ್ರಜ್ಞರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ, ವಿಜ್ಞಾನಾಧಾರಿತ ಚರ್ಚೆಗಳಲ್ಲಿ ತೊಡಗಿಸಿಕೊಂಡರು. ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನಗಳ ಬಳಕೆ, ರೋಗನಿರ್ಣಯ ವಿಧಾನಗಳ ಅಭಿವೃದ್ಧಿ, ಪ್ರಯೋಗಾಲಯದ ಗುಣಮಟ್ಟ ನಿರ್ವಹಣೆ ಹಾಗೂ ಭವಿಷ್ಯದ ಸವಾಲುಗಳ ಕುರಿತು ವಿಶೇಷ ಉಪನ್ಯಾಸಗಳು ನಡೆಯಿತು.
ಈ ಮಹತ್ವದ ಕಾರ್ಯಕ್ರಮದಲ್ಲಿ ವಿದ್ಯಾವಾಹಿನಿ ಪ್ಯಾರಾಮೆಡಿಕಲ್ ಕಾಲೇಜು ಹಾಗೂ ವಿದ್ಯಾನಿಧಿ ಇನ್‌ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸಸ್‌ನ ಒಟ್ಟು 17 ವಿದ್ಯಾರ್ಥಿಗಳು ಭಾಗವಹಿಸಿದ್ದು, ತಮ್ಮ ಅಧ್ಯಯನ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ತಜ್ಞರಿಂದ ಮಾರ್ಗದರ್ಶನ ಪಡೆದುಕೊಂಡರು. ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಪ್ರಾಯೋಗಿಕ ಪ್ರದರ್ಶನಗಳು, ಪೋಸ್ಟರ್ ಪ್ರೆಸೆಂಟೇಷನ್‌ಗಳು ಮತ್ತು ಸಂವಾದಾತ್ಮಕ ಅಧಿವೇಶನಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಗಮನ ಸೆಳೆದರು.
ಸಂಸ್ಥೆಯ ಕಾರ್ಯದರ್ಶಿ ಶ್ರೀ ಎನ್. ಬಿ. ಪ್ರದೀಪ್ ಕುಮಾರ್ ಈ ಕುರಿತು ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತಾ, ಇಂತಹ ಸಮ್ಮೇಳನಗಳು ವೃತ್ತಿಪರ ಕೌಶಲ್ಯವನ್ನು ವೃದ್ಧಿಸುವುದು ಬಹಳ ಮುಖ್ಯ. ವಿದ್ಯಾರ್ಥಿಗಳಿಗೆ ಇಂತಹ ಅವಕಾಶಗಳು ಅವರಲ್ಲಿ ಆತ್ಮವಿಶ್ವಾಸ ಬೆಳೆಸಿಕೊಳ್ಳಲು ಹಾಗೂ ನವೀನ ಜ್ಞಾನ ವೃದ್ಧಿಸಿಕೊಳ್ಳಲು ಸಹಕಾರಿ ಎಂದು ಹೇಳಿದರು. ಪ್ರಾಂಶುಪಾಲರಾದ ಪ್ರೊ. ಹುಮೇರಾ ಪರ್ವೀನ್ ಅವರು ವಿದ್ಯಾರ್ಥಿಗಳ ಸಾಧನೆಯನ್ನು ಶ್ಲಾಘಿಸಿ, ಭವಿಷ್ಯದಲ್ಲಿ ಇನ್ನಷ್ಟು ಇಂತಹ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಸಲಹೆ ನೀಡಿದರು.
ಈ ಸಮ್ಮೇಳನದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ಅಂತ್ಯದಲ್ಲಿ ಭಾಗವಹಿಸಿದ ಎಲ್ಲರಿಗೂ ಅನುಭವ ವಿನಿಮಯಕ್ಕೆ ಅವಕಾಶ ಲಭ್ಯವಾಯಿತು.
ಈ ರೀತಿಯ ವೈಜ್ಞಾನಿಕ ಸಮ್ಮೇಳನಗಳು ವಿದ್ಯಾರ್ಥಿಗಳಲ್ಲಿ ಹೊಸ ಚಿಂತನೆ, ಸಂಶೋಧನಾ ಮನೋಭಾವ ಹಾಗೂ ತಾಂತ್ರಿಕ ಜ್ಞಾನವನ್ನು ಬೆಳೆಸಲು ಪ್ರಮುಖ ಪಾತ್ರವಹಿಸುತ್ತವೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

# ಏ.12ರಂದು 6ನೇ ತರಗತಿ ಪ್ರವೇಶ ಪರೀಕ್ಷೆ

ತುಮಕೂರ: ತುಮಕೂರು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ / ಡಾ॥ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2026–27ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿ ಪ್ರವೇಶಕ್ಕೆ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಅಲ್ಪಸಂಖ್ಯಾತರ ನಿರ್ದೇಶನಾಲಯದ ಸೂಚನೆಯಂತೆ 6ನೇ ತರಗತಿ ಪ್ರವೇಶಕ್ಕೆ ರಾಜ್ಯ ಮಟ್ಟದ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಭಾನುವಾರ ನಡೆಸಲು ಉದ್ದೇಶಿಸಲಾಗಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಯ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ, ಇಂದಿರಾ ಕಾಲೇಜು ಮುಂಭಾಗ, ಉಪ್ಪಾರಹಳ್ಳಿ, ತುಮಕೂರು ಅಥವಾ ದೂರವಾಣಿ ಸಂಖ್ಯೆ: 0816–2273724ನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಯುಗದಲ್ಲಿ ಕ್ರೀಡೆ ಅವಶ್ಯಕ : ಎಂ.ಎಸ್.ಪಾಟೀಲ್



ತುಮಕೂರು: ಇತ್ತೀಚಿನ ದಿನಗಳಲ್ಲಿ ಕ್ರೀಡೆಯಿಂದ ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢತೆಯನ್ನು ಹೊಂದಬಹುದು. ಕ್ರೀಡೆ ಎಂಬುದು ಸ್ಪರ್ಧಾತ್ಮಕ ಮತ್ತು ಕೌಶಲ್ಯತೆಯಿಂದ ಕೂಡಿರುವ ಚಟುವಟಿಕೆಯಾಗಿದ್ದು, ಕ್ರೀಡೆಗಳು ಮನುಷ್ಯನ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಕಾಪಾಡುವಲ್ಲಿ ಅತ್ಯಂತ ಮಹತ್ವವಾದ್ದವುಗಳು ನಮ್ಮ ಸಂಸ್ಥೆಗಳಲ್ಲಿ ಪ್ರತಿಬಾರಿಯಂತೆ ಈ ಬಾರಿಯೂ ಕ್ರೀಡೆ ಮತ್ತು ಸಾಂಸ್ಕೃತಿಕ ಉತ್ಸವವನ್ನು ಆಯೋಜಿಸಲಿದ್ದು, ಅದರಲ್ಲಿ ಭಾಗವಹಿಸಿದ ಎಲ್ಲಾ ಬೋಧಕರು ಬೋಧಕೇತರ ಮತ್ತು ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡಿರುವುದಕ್ಕೆ ಸಂತೋಷವಾಗಿರುತ್ತದೆ ಎಂದು ಶ್ರೀದೇವಿ ಶಿಕ್ಷಣ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್. ಪಾಟೀಲ್‌ರವರು ತಿಳಿಸಿದರು.
ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಕ್ರೀಡಾ ವಾರ್ಷಿಕೋತ್ಸವವನ್ನು ಶ್ರೀದೇವಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿ ಏ.2ರಂದು ಗುರುವಾರ ಬೆಳಿಗ್ಗೆ 11ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.
ಇದೇ ಸಂದರ್ಭದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ.ಅಂಬಿಕಾ ಎಂ ಹುಲಿನಾಯ್ಕರ್‌ರವರು ಮಾತನಾಡುತ್ತಾ ಎಲ್ಲಾ ತಂಡಗಳಿಗೂ ಶುಭಕೋರಿ ಕ್ರೀಡಾ ಸ್ಪೂರ್ತಿ ವಿದ್ಯಾರ್ಥಿಗಳಲ್ಲಿ ಹೆಚ್ಚಾಗಿ ಮೂಡಲಿ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಕ್ರೀಡಾ ವಿಜೇತರಿಗೆ ಬಹುಮಾನವನ್ನು ವಿತರಿಸಲಾಗಿತ್ತು.
ಇದೇ ಸಂದರ್ಭದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಇತ್ತೀಚಿನ ದಿನಗಳಲ್ಲಿ ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗಕ್ಕೆ ಕ್ರೀಡೆ ಅವಶ್ಯಕವಾಗಿದೆ ಎಂದರು.
ಇದೇ ಸಂದರ್ಭದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ.ಅಂಬಿಕಾ ಎಂ ಹುಲಿನಾಯ್ಕರ್, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ ಡಾ.ಪ್ರದೀಪ್‌ಕುಮಾರ್ ವೆಗ್ಗಿ, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಉಪಅಧೀಕ್ಷಕರಾದ ಡಾ.ಚೆನ್ನಮಲ್ಲಯ್ಯ, ಶ್ರೀದೇವಿ ವೈದ್ಯಕೀಯ ಕಾಲೇಜಿನ ನ್ಯಾಯವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ಕ್ರೀಡಾ ಸಂಯೋಜಕರಾದ ಡಾ.ಎಸ್.ಮಧುಸೂದನ್, ವೈದ್ಯರಾದ ಡಾ.ಚೇತನ್, ಡಾ.ಶ್ರೀಧರ್, ಡಾ.ರವೀಶ್, ದೈಹಿಕ ಶಿಕ್ಷಣ ನಿರ್ದೇಶಕರಾದ ರಾಘವೇಂದ್ರ ಜಟ್ಟಣ, ಶ್ವೇತಾ ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು ಪ್ರಾಧ್ಯಾಪಕ, ಬೋಧಕ– ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.
ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಕ್ರೀಡಾ ವಾರ್ಷಿಕೋತ್ಸವವನ್ನು ಶ್ರೀದೇವಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿ ಏ.2 ಗುರುವಾರ ಬೆಳಿಗ್ಗೆ 11ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಶ್ರೀದೇವಿ ಶಿಕ್ಷಣ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್. ಪಾಟೀಲ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ.ಅಂಬಿಕಾ ಎಂ ಹುಲಿನಾಯ್ಕರ್, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ ಡಾ.ಪ್ರದೀಪ್‌ಕುಮಾರ್ ವೆಗ್ಗಿ, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಉಪಅಧೀಕ್ಷಕರಾದ ಡಾ.ಚೆನ್ನಮಲ್ಲಯ್ಯ, ವೈದ್ಯರಾದ ಡಾ.ಚೇತನ್, ಡಾ.ಶ್ರೀಧರ್, ಡಾ.ರವೀಶ್ ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು ಪ್ರಾಧ್ಯಾಪಕ, ಬೋಧಕ– ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# 87ನೆ ಬೆಳದಿಂಗಳ ಹುಣ್ಣಿಮೆ ಪೂಜಾ ಸತ್ಸಂಗ



ಮಧುಗಿರಿ ...ತಾನು ಬದುಕುವ ಹಾದಿಯನ್ನು ನೋಡಿ ಮನುಕುಲವೇ ಮೆಚ್ಚುವಂತಿರಬೇಕು. ಮನುಕುಲದ ಮನಕ್ಕೆ ಮಸಿ ಬಳಿಯುವ ಜೀವನ ನಮ್ಮದಾಗಬಾರದು. ಜೀವನಕ್ಕೆ ಆದಾಯ(ಗಳಿಕೆ)ಬೇಕು. ಆದರೆ ಗಳಿಕೆಯೇ ಜೀವನವಾಗಬಾರದು. ಮಾನವನ ದಡಿಮೆ ಬಸಿದ ಬೆವರಿನ ಬೆಣ್ಣೆಯಂತಾಗಬೇಕು ಎಂದು ಟಿ ವಿ ವಿ ಕಾಲೇಜಿನ ನಿವೃತ್ತ ಪ್ರಾಚಾರ್ಯ ಸಿ, ಕೃಷ್ಣಪ್ಪ ನುಡಿದರು. ಪಟ್ಟಣದ ಕಾಳಿಕಾಂಬ ದೇವಿಗೆ ವಿಶ್ವ ಶಂಕರ ಫೌಂಡೇಶನ್ನಿನ ವತಿಯಿಂದ ಬ್ರಾಹ್ಮೀ ಮುಹೂರ್ತದಲ್ಲಿ ನಡೆದ 87ನೆಯ ಬೆಳದಿಂಗಳ ಹುಣ್ಣಿಮೆಯ ಪೂಜಾ ಸತ್ಸಂಗದಲ್ಲಿ ಪ್ರವಚನ ನೀಡುತ್ತಾ ಬಣ್ಣದ ಬದುಕಿನ ಚಿತ್ತಾರ ನೋಟಕ್ಕೆ ಮಾತ್ರ ಚೆಂದ. ಅನುಭವಿಸಲು ಚೆನ್ನಾಗಿರುವುದಿಲ್ಲ. ಕಷ್ಟಗಳ ಹೊಡೆತಕ್ಕೆ ಬಣ್ಣ ಕರಗಿಹೋಗುತ್ತದೆ. ಕಷ್ಟ ಕಾರ್ಪಣ್ಯಕ್ಕೆ ಕರಗದ ಜೀವನ ನಮ್ಮದಾಗಬೇಕು. ಹಾಗಾದರೆ ನಾವು ನಡೆಯುವ ದಾರಿ ಚೆನ್ನಾಗಿರಬೇಕಲ್ಲವೇ? ಅಂದ ಹಾಗೆ ನಮ್ಮ ಅಂತರಾಳದಲ್ಲಿ ಭಕ್ತಿಯ ಗಿಡ ಹುಟ್ಟ ಬೇಕು. ಭಕ್ತಿ ಪಂಜಿನ ಬೆಳಕಿನಂತೆ ನಮ್ಮ ಕೈ ಹಿಡಿದು ನಡೆಸುತ್ತದೆ. ಭಕ್ತಿಯ ಬೆಳಕು ಸೂರ್ಯನಷ್ಟೇ ಪ್ರಖರವಾಗಿರುತ್ತದೆ. ಭಕ್ತಿಯ ಗಿಡ ಚಿಗುರಿದವನ ಹೃದಯದಲ್ಲಿ ಶರೀರ ಮೋಹ ಕಾಣದು. ಅಹಂಕಾರ ಗೂಡು ಕಟ್ಟದು. ಉಸಿರಿನಲ್ಲಿ ಭಯವಿರದು. ಕಾಮನೆಗಳು ಕಾವಿತೊಡುತ್ತವೆ. ಚಿತ್ತ ನಿರಪೇಕ್ಷವಾಗುತ್ತದೆ . ಜ್ಞಾನ ಪರಮಾನಂದವನ್ನು ಅನುಭವಿಸುತ್ತದೆ. ಭಾವ ದಿಗಂಬರವನ್ನು ಅಪ್ಪಿಕೊಳ್ಳುತ್ತದೆ. ಒಟ್ಟಾರೆ ಬದುಕು ತೃಪ್ತಿಯ ತುಪ್ಪವಾಗುತ್ತದೆ. ತುಪ್ಪದ ಊಟ ಯಾರು ಬೇಕಾದರೂ ಉಣ್ಣಲಿ.. ಭಕ್ತಿಯ ಹಾದಿ ಮನುಕುಲವನ್ನು ಎತ್ತರಕ್ಕೆ ಬೆಳೆಸುತ್ತದೆ.ದೇವರಿಗೆ ಪೂಜೆ ಮಾಡಿದರೆ ಸಾಲದು. ಮಾತಾ ಪಿತೃಗಳಿಗೆ ಪೂಜೆ ನಡೆಯಬೇಕು ಪಾದ ಪೂಜೆಗಿಂತಲೂ ಪದ ಪೂಜೆ ಶ್ರೇಷ್ಠ. ಆಧುನಿಕ ಕಾಲದಲ್ಲಿ ಇಂಥ ಸತ್ಸಂಗಗಳು ಹೆಚ್ಚು ನಡೆಸಬೇಕೆಂದು ನುಡಿದರು. ಇದೇ ಸಂದರ್ಭದಲ್ಲಿ ವಿಶ್ವಶಂಕರ ಫೌಂಡೇಶನ್ನಿನ ವತಿಯಿಂದ ಪ್ರೊ.ಸಿ.ಕೃಷ್ಣಪ್ಪ ಹಾಗೂ ಹಿರಿಯರಾದ ರಾಮಾಚಾರ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸೇವಾಕರ್ತರಾದ ಹಳೇಹಟ್ಟಿ ಗೋವಿಂದರಾಜು ಶ್ರೀಮತಿಕಮಲ ಕುಮಾರಿ ಗುಣ ಶ್ರೀ, ಶ್ರೀನಿವಾಸ, ಪುರೋಹಿತ ದೊಡ್ಡೇರಿ ಸಾಯಿಪ್ರಕಾಶ್, ಈರಣ್ಣ, ಧನುಷ್,ರಮೇಶ,ಶ್ರೀನಿವಾಸ, ಶ್ರೀಧರ, ಶಶಾಂಕ್,ಡಾ ಅಮರಾವತಿ ದ್ರೇಹಾಚಾರ್ ಮೊದಲಾದವರು ಉಪಸ್ಥಿತರಿದ್ದರು.

# ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿ ಯಥಾವತ್ ಜಾರಿಯಾಗಬೇಕು: ಮಾದಿಗರ ಪ್ರತಿಭಟನೆ



ಮಧುಗಿರಿ:ಒಳ ಮೀಸಲಾತಿ ವರ್ಗೀಕರಣಕ್ಕಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸುಮಾರು 30 ವರ್ಷಗಳಿಂದ ನಿರಂತರವಾಗಿ ಹೋರಾಟ ನಡೆಸುತ್ತಿದ್ದು ಸಂವಿಧಾನದ ಆಶಯದಂತೆ ನಮ್ಮ ಪಾಲನ್ನು ಸಮಾನ ಹಂಚಿಕೆ ಮಾಡಿಕೊಡುವುದು ಸರ್ಕಾರದ ಜವಾಬ್ದಾರಿ ಎಂದು ಡಿಎಸ್‌ಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಡಿ.ಕೃಷ್ಣಪ್ಪ ಬೆಲ್ಲದಮಡು ಒತ್ತಾಯಿಸಿದರು.
ಪಟ್ಟಣದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಗೌರವ ಸಲ್ಲಿಸಿದ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ನಂತರ ಪಾವಗಡ ವೃತ್ತದಿಂದ ತಾಲೂಕು ಕಚೇರಿ ವರೆಗೂ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಅವರು ಜನಸಂಖ್ಯೆಗೆ ಅನುಗುಣವಾಗಿ ಅವಕಾಶ ದಕ್ಕಬೇಕು ಮತ್ತು ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿ ಯಥಾವತ್ ಜಾರಿಯಾಗಬೇಕು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಎಸ್ ಸಿ ಪಿ /ಟಿ ಎಸ್ ಪಿ ಹಣವನ್ನು ಮೂರು ವರ್ಷಗಳಲ್ಲಿ 34,000 ಕೋಟಿ ಹಣವನ್ನು ಸಾರ್ವಜನಿಕ ಅಭಿವೃದ್ಧಿಗೆ ಬಳಸಿಕೊಂಡು ಎಸ್ಸಿ ಎಸ್ಟಿ ಸಮುದಾಯಗಳಿಗೆ ಘೋರ ಅನ್ಯಾಯ ಮಾಡಿರುತ್ತಾರೆ ಬೆಲ್ಲದಮಡುಗು ಗ್ರಾಮದ ಸರ್ವೆ ನಂಬರ್ 112 ರಲ್ಲಿ ಎರಡು ಗುಂಟೆ ಜಮೀನಿನಲ್ಲಿ ದಲಿತ ಚಳುವಳಿ ಹೋರಾಟಗಾರರಾದ ದಿವಂಗತ ಬೆಲ್ಲದಮಡು ರಂಗ ಶಾಮಣ್ಣ ರವರ ಸ್ಮಾರಕ ನಿರ್ಮಿಸಲಾಗುತ್ತಿದೆ ಇದಕ್ಕೆ ಎರಡು ಕೋಟಿ ರೂ ಹಣವನ್ನು ಮಂಜೂರು ಮಾಡಬೇಕೆಂದು ಒತ್ತಾಯಿಸಿದರು, ಮಧುಗಿರಿ ಪಟ್ಟಣ ಕೆಆರ್ ಬಡಾವಣೆ, ಬೆಂಕಿಪುರ ರಾಜೀವ್ ಗಾಂಧಿ ಬಡಾವಣೆ ಮತ್ತು ಕರಡಿಪುರ ಬಡಾವಣೆಗಳಲ್ಲಿ ಸುಮಾರು ವರ್ಷಗಳಿಂದ ಗುಡಿಸಲುಗಳಲ್ಲಿ ವಾಸ ಮಾಡುತಿರುವ ದಲಿತರಿಗೆ ಮೂಲಭೂತ ಸೌಲಭ್ಯ ಒದಗಿಸಿಕೊಡಬೇಕು, ಸಿದ್ದಾಪುರ ಗ್ರಾಮದಲ್ಲಿ ಮಾದಿಗ ಸಮುದಾಯ ಹೆಚ್ಚಾಗಿದ್ದು ಅವರಿಗೆ ರುದ್ರಭೂಮಿ ಇಲ್ಲದೆ ಇರುವುದು ದೌರ್ಭಾಗ್ಯವಾಗಿದೆ ಸರ್ಕಾರ ತಕ್ಷಣ ಗ್ರಾಮಕ್ಕೆ ರುದ್ರ ಭೂಮಿ ಮಂಜೂರು ಮಾಡಿಕೊಡಬೇಕು ಪಟ್ಟಣದ ಅಂಬೇಡ್ಕರ್ ಭವನ ನಿರ್ವಹಣೆ ಕಾಟಾಚಾರವಾಗಿದೆ ಸಮಾಜ ಕಲ್ಯಾಣ ಇಲಾಖೆ ಮತ್ತು ಮಧುಗಿರಿ ಪುರಸಭೆ ಅಂಬೇಡ್ಕರ್ ಭವನವನ್ನು ಸುಸಜ್ಜಿತಗೊಳಿಸಬೇಕು, ಕಡಗತ್ತೂರು ಗ್ರಾಮವು ಗಡಿ ಅಂಚಿನ ಭಾಗವಾಗಿದ್ದು ಅಲ್ಲಿನ ಮಕ್ಕಳ ಶಾಲಾ ಕಾಲೇಜುಗಳಿಗೆ ಬಸ್ಸಿನ ಸವಲತ್ತು ಇರುವುದಿಲ್ಲ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಅವಕಾಶ ಕಲ್ಪಿಸಿಕೊಡಬೇಕು ಮಧುಗಿರಿ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಕಾಲನಿಗಳಲ್ಲಿ ಸ್ವಚ್ಛತಾ ಕಾರ್ಯಕ್ರಮ ಇಲ್ಲದೆ ಚರಂಡಿ ಹುಳುಗಳ ತಾಣವಾಗಿ ಸ್ವಚ್ಛತೆ ಮಾಯವಾಗಿದ್ದು ಇಂತಹ ಕಡೆಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕಾಗಿದೆ ಎಂದು ತಿಳಿಸಿದರು.
ಹೀಗೆ ವಿವಿಧ ಸಮಸ್ಯೆಗಳ ಈಡೇರಿಕೆಗಾಗಿ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪಟ್ಟಣದ ಅಂಬೇಡ್ಕರ್ ಪುತ್ಥಳಿಯಿಂದ ತಾಲೂಕು ಕಚೇರಿ ವರೆಗೂ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಧರಣಿ ಸತ್ಯಾಗ್ರಹ ನಡೆಸಿ ತಹಶೀಲ್ದಾರ್ ಅವರಿಗೆ ಮನವಿ ಪತ್ರ ಅರ್ಪಿಸಿದರು.
ಪ್ರತಿಭಟನೆಯಲ್ಲಿ ಸಂಘರ್ಷ ಸಮಿತಿಯ ಪದಾಧಿಕಾರಿಗಳಾದ ಭರತ್ ಕುಮಾರ್ ಬೆಲ್ಲದಮಡಗು, ದಾಸೇನಹಳ್ಳಿ ಜಯರಾಮಯ್ಯ, ತಾಲೂಕು ಅಧ್ಯಕ್ಷ ರವಿಕುಮಾರ್, ಅಶ್ವತಪ್ಪ, ಲಕ್ಷ್ಮಮ್ಮ, ಶಿವಣ್ಣ, ಪ್ರದೀಪ್, ಹೆಚ್. ಹನುಮಂತರಾಯಪ್ಪ, ಮಲೇರಂಗಪ್ಪ, ಬೆಟ್ಟಪ್ಪ, ಹೆಚ್ ನಾಗರಾಜು, ಮುನಿರಾಜು, ನೀರಕಲ್ಲು ನರಸಿಂಹಯ್ಯ, ಕೆಂಪ ರಂಗಣ್ಣ,ಹಾಗೂ ದಲಿತ ಸಂಘರ್ಷ ಸಮಿತಿಯ ವಿವಿಧ ಘಟಕದ ಪದಾಧಿಕಾರಿಗಳು, ಮುಖಂಡರು ಹಾಜರಿದ್ದರು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಜನಗಣತಿಗೆ ಶಿಕ್ಷಕರು ಸಮರ್ಥರು : ಆರ್.ಚಂದ್ರಯ್ಯ ನಗರಸಭೆಯಿಂದ 3 ದಿನಗಳ ಕಾಲ ಜನಗಣತಿ ಕಾರ್ಯಾಗಾರ

ರಾಮನಗರ: ಜನಗಣತಿ ಕಾರ್ಯವು ರಾಷ್ಟ್ರದ ಅತ್ಯಂತ ಪ್ರಮುಖ ಮತ್ತು ಬೃಹತ್ ಕಾರ್ಯಕ್ರಮವಾಗಿದ್ದು, ಶಿಕ್ಷಕರಿಂದ ಮಾತ್ರ ಜನಗಣತಿ ಕಾರ್ಯ ಸಮರ್ಥವಾಗಿ ನಿರ್ವಹಿಸಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಆರ್.ಚಂದ್ರಯ್ಯ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಗರಸಭೆ ವತಿಯಿಂದ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಶಿಕ್ಷಕರಿಗೆ ಜನಗಣತಿ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು. ಜನಗಣತಿ ಕಾರ್ಯಾಗಾರಕ್ಕೆ ಗಿಡಕ್ಕೆ ನೀರೆರೆಯುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು

ಜನಗಣತಿ ಕಾರ್ಯವು ಸಂವಿಧಾನ ಬದ್ಧವಾದ ಕಾರ್ಯ. ಅದರ ಯಶಸ್ಸಿನಲ್ಲಿ ಗಣತಿದಾರರಾದ ಶಿಕ್ಷಕರ ಪಾತ್ರ ಮಹತ್ವದ್ದು.

ಈಗಾಗಲೇ ಚುನಾವಣೆ ಕರ್ತವ್ಯ, ಜಾತಿ ಗಣತಿ ಮತ್ತು ಹಿಂದುಗಳಿದ ವರ್ಗಗಳ ಆಯೋಗದ ಸಮೀಕ್ಷೆಯನ್ನು ಅತ್ಯಂತ ಸಮರ್ಥವಾಗಿ ಶಿಕ್ಷಕರು ನಿರ್ವಹಿಸಿದ್ದಾರೆ. ಜನಗಣತಿ ಕಾರ್ಯವನ್ನು ಸಹ ಅಷ್ಟೇ ಜವಾಬ್ದಾರಿಯಿಂದ ನಿರ್ವಹಿಸುವ ನಂಬಿಕೆ ತಮಗಿದೆ ಎಂದರು.

ಜನಗಣತಿಯು ರಾಷ್ಟ್ರೀಯ ಮಟ್ಟದ ಪ್ರಮುಖ ಕಾರ್ಯವಾಗಿದೆ. ಐದು ತಹಶೀಲ್ದಾರ್ ಗಳು ಚಾರ್ಜ್ ಅಧಿಕಾರಿಗಳು ಸ್ಥಳೀಯ ಸಂಸ್ಥೆಗಳ ಆರು ಅಧಿಕಾರಿಗಳು ಮೇಲ್ವಿಚಾರಣೆ ಮಾಡುತ್ತಾರೆ. ವ್ಯವಸ್ಥಿತವಾಗಿ ಈ ಡಿಜಿಟಲ್ ಗಣತಿಗೆ ಯೋಜನೆ ಮಾಡಲಾಗಿದೆ.

ಇದೊಂದು ಅವಕಾಶ ಎಂದು ಭಾವಿಸಿ ಗಣತಿ ಮಾಡಬೇಕು.



1872ರಲ್ಲಿ ಮೊದಲ ಜನಗಣತಿ ನಡೆಯಿತು. ಸ್ವತಂತ್ರ ನಂತರ ನಡೆಯುತ್ತಿರುವ 8 ನೇ ಜನಗಣತಿಯಾಗಿದ್ದು, ಡಿಜಿಟಲ್ ಮೋಡ್ ನಲ್ಲಿ ನಡೆಯುತ್ತಿರುವ ಮೊದಲ ಗಣತಿಯಾಗಿದ್ದು, ಪ್ರತಿಯೊಬ್ಬರೂ ಅತ್ಯಂತ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಜಿಲ್ಲೆಯಲ್ಲಿ ಈ ಜನಗಣತಿಗಾಗಿ 40 ಜನರಿಗೆ ಒಬ್ಬರಂತೆ ಕ್ಷೇತ್ರ ತರಬೇತುದಾರರನ್ನು ನೇಮಿಸಲಾಗಿದೆ. ಯಾವುದೇ ಗೊಂದಲ ಇದ್ದರೂ ಅದನ್ನು ಪರಿಹರಿಸಲು ವಿವಿಧ ಹಂತದಲ್ಲಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಮೊಟ್ಟ ಮೊದಲಿಗೆ ಡಿಜಿಟಲ್ ರೂಪದಲ್ಲಿ ಜನಗಣತಿ ನಡೆಯುತ್ತಿದೆ. ಈ ಜನಗಣತಿಯು 2 ಹಂತದಲ್ಲಿ ನಡೆಯಲಿದ್ದು, ಮೊದಲ ಹಂತದಲ್ಲಿ 2026ರ ಏಪ್ರಿಲ್ 16 ರಿಂದ ಮೇ 15 ರ ವರೆಗೆ ಮನೆ ಪಟ್ಟಿ ಕ್ಷೇತ್ರ ಕಾರ್ಯ ನಡೆಯಲಿದೆ ಹಾಗೂ ಎರಡನೇ ಹಂತದ ಜನಗಣತಿಯೂ 2027ರ ಫೆಬ್ರವರಿ 1 ರಿಂದ ಫೆಬ್ರವರಿ 28ರವರೆಗೆ ನಡೆಯಲಿದೆ. ಜೊತೆಗೆ ಸಾರ್ವಜನಿಕರಿಗೂ ಸ್ವಯಂ ಗಣತಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

ವಿಶ್ವದ ಅತಿ ದೊಡ್ಡ ದತ್ತಾಂಶ ಸಂಗ್ರಹದ ಗಣತಿ

ದೇಶದಲ್ಲಿ ಯೋಜನೆಗಳು, ಕಾರ್ಯಕ್ರಮಗಳನ್ನು ರೂಪಿಸಲು ಈ ಗಣತಿಯ ದತ್ತಾಂಶವೇ ಆಧಾರ. ಗಣತಿಗೆ ಸ್ಮಾರ್ಟ್ ಫೋನ್ ಬಳಕೆ ಕಡ್ಡಾಯ. ಗಣತಿ ಸಂದರ್ಭದಲ್ಲಿ ಮೊಬೈಲ್ ಬದಲಾಯಿಸಬೇಡಿ.

ಗಣತಿ ಸಂದರ್ಭದಲ್ಲಿ ಯಾರಾದರೂ ನಿರ್ಲಕ್ಷ್ಯ ತೋರಿದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಗರಸಭೆ ಪೌರಾಯುಕ್ತ ಡಾ.ಜಯಣ್ಣ ಮಾತನಾಡಿ, ಪ್ರತಿ 10 ವರ್ಷಕ್ಕೊಮ್ಮೆ ಜನಗಣತಿಯನ್ನು ಕೈಗೊಳ್ಳಬೇಕಾಗಿತ್ತು. ಆದರೆ ಇಡೀ ಪ್ರಪಂಚದಾದ್ಯಂತ ಸಾಂಕ್ರಾಮಿಕ ಪಿಡುಗು ಕೋವಿಡ್ ಕಾರಣದಿಂದಾಗಿ 2021ರಲ್ಲಿ ಜನಗಣತಿ ಕಾರ್ಯ ಸಾಧ್ಯವಾಗಲಿಲ್ಲ. ಈಗಾಗಲೇ ವಿದ್ಯುಕ್ತವಾಗಿ ಏ. 1ರಿಂದ ಪ್ರಾರಂಭವಾಗಿರುವ ಜನಗಣತಿಯಲ್ಲಿ ಸ್ವಯಂ ಗಣತಿ ಮಾಡಿಕೊಳ್ಳುವ ಅವಕಾಶವನ್ನು ಸರ್ಕಾರ ಜನಸಾಮಾನ್ಯರಿಗೆ ಕೊಟ್ಟಿದೆ. ಜತೆಗೆ ಗಣತಿದಾರರು ಮನೆಮನೆಗೆ ತೆರಳಿ ಸರಿಯಾದ ಹಾಗೂ ನಿಖರ ಮಾಹಿತಿ ಸಂಗ್ರಹಿಸುವ ಮೂಲಕ ಜನಗಣತಿಯ ಯಶಸ್ಸಿಗೆ ಕೈಜೋಡಿಸಬೇಕು. ಸಾರ್ವಜನಿಕರೊಂದಿಗೆ ಉತ್ತಮ ಸಂವಹನ ಬೆಳೆಸಿ, ಅವರಿಗೆ ಸ್ವಯಂ-ಗಣತಿ ಕುರಿತು ಸ್ಪಷ್ಟ ಮಾಹಿತಿ ನೀಡಿ ಸಹಕಾರ ಪಡೆಯುವುದು ಅಗತ್ಯವಾಗಿದೆ. ಸರಳ ಆಪ್ ಮೂಲಕ ಸಂಪೂರ್ಣ ಡಿಜಿಟಲ್ ಜನಗಣತಿಯಾಗಿದ್ದು, ಜನಗಣತಿಯನ್ನು ಎಲ್ಲರೂ ಸೇರಿ ಯಶಸ್ವಿಗೊಳಿಸಬೇಕಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪಿ. ಸೋಮಲಿಂಗಯ್ಯ ಮಾತನಾಡಿ, ಗಣತಿ ಮಾದರಿಯ ಹಲವು ಸಮೀಕ್ಷೆಗಳನ್ನು ಮಾಡಿರುವ ಶಿಕ್ಷಕರಿಗೆ ಜನಗಣತಿ ಹೊಸದೇನಲ್ಲ. ನಮ್ಮ ದೇಶದ ಹಿತದೃಷ್ಟಿಯಿಂದ ನಡೆಯುತ್ತಿರುವ ಜನಗಣತಿಯನ್ನು ಅತ್ಯಂತ ಜವಾಬ್ದಾರಿಯುತವಾಗಿ ಮಾಡಬೇಕು. ಗಣತಿದಾರರು ಹೊಂದಾಣಿಕೆಯಿಂದ ಪ್ರಾಮಾಣಿಕವಾಗಿ ನಿಗದಿತ ಸಮಯದೊಳಗೆ ಕರ್ತವ್ಯ ನಿರ್ವಹಿಸುವ ಮೂಲಕ ಗಣತಿ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದರು.

ಕಂದಾಯ ನಿರೀಕ್ಷಕ ಆರ್. ನಾಗರಾಜು ನಿರೂಪಣೆ ಮಾಡಿದರು. ಈ ವೇಳೆ ನಗರಸಭೆ ಅಧಿಕಾರಿಗಳಾದ ವಿಶ್ವನಾಥ್, ಸುಬ್ರಹ್ಮಣ್ಯ, ವಿಜಯಕುಮಾರ್, ಲಕ್ಷ್ಮೀದೇವಿ ಮತ್ತಿತರರು ಇದ್ದರು..

# ವಸತಿ ನಿವೇಶನಕ್ಕೆ ಆಗ್ರಹಿಸಿ ಗ್ರಾಮಸ್ಥರ ಪ್ರತಿಭಟನೆ

ರಾಮನಗರ : ಸರ್ಕಾರ ನೀಡಿರುವ ವಸತಿ ನಿವೇಶನಗಳನ್ನು ಹಂಚಿಕೆ ಮಾಡಿ ಬಡ ಜನರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಆಗ್ರಹಿಸಿ ಕನಕಪುರ ತಾಲ್ಲೂಕು ಕೋಡಿಹಳ್ಳಿ ಹೋಬಳಿ ಅರ್ಜುನಹಳ್ಳಿ ತಾಂಡ್ಯದ ಜನರು ರಾಮನಗರ ಜಿಲ್ಲಾಧಿಕಾರಿಗಳ ಕಛೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಸ್ವಗ್ರಾಮ ಅರ್ಜುನಹಳ್ಳಿ ತಾಂಡ್ಯದಿಂದ ಆಗಮಿಸಿದ ಜನರು ಜಿಲ್ಲಾಧಿಕಾರಿಗಳ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿದರು. ಜಿಲ್ಲಾಡಳಿತ ಮತ್ತು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಗ್ರಾಮಸ್ಥರು ಸರ್ಕಾರ ನೀಡಿರುವ ನಿವೇಶನ ನಮಗೆ ದಕ್ಕಿಲ್ಲ ನಮಗೆ ನ್ಯಾಯಬೇಕು. ಕೂಡಲೇ ಸ್ಥಳ ಪರಿಶೀಲನೆ ನಡೆಸಿ ನಿವೇಶನ ಜಾಗ ಕೊಡಿಸಬೇಕು ಎಂದು ಆಗ್ರಹಿಸಿದರು.

60 ಕುಟುಂಬಗಳಿಗೆ ವಾಸಿಸಲು ನಿವೇಶನಗಳಿಲ್ಲದೆ ಜೋಪಡಿ ರೀತಿ ಗುಡಿಸಲುಗಳಲ್ಲಿ ವಾಸವಾಗಿರುತ್ತೇವೆ. ಕಡು ಬಡತನದಲ್ಲಿ ಕೂಲಿ ಕೆಲಸ ಮಾಡುತ್ತಾ ಜೀವನ ಕಟ್ಟಿಕೊಂಡಿರುವ ನಮಗೆ ನಿವೇಶನ ಸಿಗಂದಂತಾಗಿದೆ. ನಮ್ಮ ಕಷ್ಟದ ಬಗ್ಗೆ ನಿವೇಶನ ಸಿಗಲು ಆಗುತ್ತಿರುವ ತೊಂದರೆ ಹಲವಾರು ಭಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವ ಪ್ರಯೋಜನ ಕೂಡ ಆಗಿಲ್ಲ ಎಂದು ಕಿಡಿಕಾರಿದರು.

ಆದರೆ ಇದೇ ಗ್ರಾಮದ ಈ ಹಿಂದೆ ಲೇ. ಮುನಿಸ್ವಾಮಿನಾಯಕ ಕುಟುಂಬದವರು ನಮಗೆ ಮಂಜುರೂ ಆಗಿರುವ ಜಮೀನಿನ ಬಾಜುದಾರರಾಗಿದ್ದು ಸದರಿ ನಮಗೆ ನೀಡಿರುವ ನಿವೇಶನ ಸ್ಥಳದ ಜಮೀನನ್ನು ಸಹ ಒತ್ತುವರಿ ಮಾಡಿಕೊಂಡಿದ್ದು ಈ ಹಿಂದೆ ಅಳತೆ ಮಾಡಿ ನೋಡಿ ಮಾಡಿಸಲು ಬಂದ ಸರ್ಕಾರಿ ಅಧಿಕಾರಗಳು ಸರ್ವೇ ಅಧಿಕಾರಗಳು ಮತ್ತು ಪಂಚಾಯಿತಿ ಅಧಿಕಾರಗಳ ವಿರುದ್ಧ ಹಾಗೂ ಇತರೆ ಸರ್ಕಾರಿ ಅಧಿಕಾರಗಳ ವಿರುದ್ಧ ಸುಳ್ಳು ಜಾತಿ ನಿಂದನೆ ದೂರುಗಳನ್ನು ಸಲ್ಲಿಸಿ ಇದುವರೆಗೂ ಒತ್ತುವರಿಯಾಗಿರುವ ಜಾಗವನ್ನು ಅವರು ತೆರುವುಗೊಳಿಸುತ್ತಿಲ್ಲ ಹಾಗೂ ಇದರ ವಿರುದ್ಧ ಮಾನ್ಯ ಕರ್ನಾಟಕ ಉಚ್ಚನ್ಯಾಯಲಯದಲ್ಲಿ ರಿಟ್ ಅರ್ಜಿ ಸಲ್ಲಿಸಿ ತಾತ್ಕಲಿಕ ತಡೆಯಾಜ್ಞೆಸಹ ತಂದಿದ್ದಾರೆ ಹಾಗೂ ಗ್ರಾಮದ ಮುಖ್ಯಸ್ಥರ ವಿರುದ್ಧ ಸುಳ್ಳು ದೂರುಗಳನ್ನು ಸಲ್ಲಿಸಿ ಯೋಜನೆ ಕಾರ್ಯರೂಪಕ್ಕೆ ತರಲು ಅಡ್ಡಿಪಡಿಸಿ ಹೊಸದಾಗಿ ಬರುವ ಸರ್ಕಾರಿ ಅಧಿಕಾರಿಗಳ ವಿರುದ್ಧ ಸುಳ್ಳು ದೂರುಗಳು ಹಾಗೂ ಜಾತಿನಿಂದನೆ ಕೇಸ್ ಗಳನ್ನು ದಾಖಲಿಸಿದ್ದಾರೆ ಎಂದರು.

ಹೀಗಾಗಿ ಕೂಡಲೇ ಈ ವಿಚಾರವಾಗಿ ಪರಾಮರ್ಶಿಸಿ ನಮಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ಸ್ಥಳಕ್ಕೆ ಬಂದು ಕೂಲಂಕುಷವಾಗಿ ವಿಚಾರಣೆ ನೆಡಸಿ ನಮ್ಮಗಳಿಗೆ ಸರ್ಕಾರ ನೀಡಿರುವ ವಸತಿ ನಿವೇಶನಗಳನ್ನು ಹಂಚಿಕೆಯಾಗುವಂತೆ ಅನುಕೂಲ ಮಾಡಿಕೊಡಬೇಕು ಹಾಗೂ ನಮ್ಮಗಳ ಹಾಗೂ ಸರ್ಕಾರಿ ಅಧಿಕಾರಗಳ ಮೇಲೆ ಇಲ್ಲ ಸಲ್ಲದ ಸುಳ್ಳು ಆರೋಪ ಮಾಡಿ ಸುಳ್ಳು ದೂರುಗಳನ್ನು ಸಲ್ಲಿಸುತ್ತಿರುವ ಸೋಮಿಬಾಯಿ ಸತೀಶ್ ನಾಯ್ಕ, ರಮೇಶ್ ನಾಯ್ಕ, ಶ್ರೀನಿವಾಸ ನಾಯ್ಕ, ಶೃತಿಬಾಯಿ, ಇವರುಗಳ ಮೇಲೆ ಕಾನೂನು ರೀತಿ ಕ್ರಮ ತೆಗೆದುಕೊಳ್ಳಬೇಕೆಂದು ಡಿಸಿಗೆ ಮನವಿ ಪತ್ರ ನೀಡಿ ಒತ್ತಾಯಿಸಿದರು.

# ಬಿಡದಿ ಸೊಸೈಟಿ ಆಡಳಿತ ಮಂಡಳಿ ಚುನಾವಣೆಗೆ ನಾಮಪತ್ರ ಸಲ್ಲಿಕೆ ಜೆಡಿಎಸ್-ಕಾಂಗ್ರೆಸ್ ಜಿದ್ದಾಜಿದ್ದಿನ ಹೋರಾಟಕ್ಕೆ ವೇದಿಕೆ ಸಜ್ಜು

ರಾಮನಗರ: ತಾಲ್ಲೂಕಿನ ಪ್ರತಿಷ್ಠಿತ ಬಿಡದಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತದ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಗೆ ಏ.1ರ ಬುಧವಾರದಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು ಮತ್ತೊಮ್ಮೆ ಜೆಡಿಎಸ್ ಮತ್ತು ಕಾಂಗ್ರೆಸ್ ಸಮರಕ್ಕೆ ವೇದಿಕೆ ಸಜ್ಜಾಗಿದೆ.

1976ರಲ್ಲಿ ಬಿಡದಿ ರೈತರ ಸೇವಾ ಸಹಕಾರ ಸಂಘ ನಿ. ಹೆಸರಲ್ಲಿ ಸ್ಥಾಪನೆಯಾಗಿ ಸದೃಢವಾಗಿ ಬೆಳೆದು ಇದೀಗ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತ ಹೆಸರಲ್ಲಿ ಚಾಲ್ತಿಯಲ್ಲಿದೆ. ಸಂಸ್ಥಾಪಕರಾದ ಶರಬಯ್ಯ ಹಾಗೂ ಮಾಜಿ ಶಾಸಕ ಸಿ.ಬೋರಯ್ಯ ಅವರ ಆದಿಯಾಗಿ ಅನೇಕರು ಅಧ್ಯಕ್ಷರಾಗಿ ಸಂಘದ ಬೆಳವಣಿಗೆಗೆ ಸಹಕಾರಿಯಾಗಿದ್ದಾರೆ. ಹಿಂದೆ ಜನತಾದಳದಿಂದ ಈಗಿನ ಜೆಡಿಎಸ್ ಪಕ್ಷದ ಬೆಂಬಲಿತರು ಅಧಿಕಾರದ ಚುಕ್ಕಾಣಿ ಹಿಡಿದಿದ್ದು ಕಾಂಗ್ರೆಸ್ ಪ್ರತಿಪಕ್ಷಕಷ್ಟೇ ಸೀಮಿತವಾಗಿದೆ.

ಕಳೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ 7 ಮತ್ತು ಕಾಂಗ್ರೆಸ್ ಬೆಂಬಲಿತ 5 ಮಂದಿ ನಿರ್ದೇಶಕರು ಗೆಲುವು ಸಾಧಿಸಿದ್ದರು. ಕೊನೆಯ ವಧಿಯಲ್ಲಿ ಜೆಡಿಎಸ್ ತೆಕ್ಕೆಯಲ್ಲಿದ್ದ ಅಧಿಕಾರವನ್ನು ಇಬ್ಬರು ದಳಪತಿಗಳ ಬೆಂಬಲದೊಂದಿಗೆ ಕಾಂಗ್ರೆಸ್ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿತ್ತು. ಈ ಬಾರಿ ಜೆಡಿಎಸ್-ಬಿಜೆಪಿ ಮೈತ್ರಿ ಪಕ್ಷಕ್ಕೆ ಪ್ರಬಲ ಪೈಪೋಟಿ ನೀಡಲು ಸಜ್ಜಾಗಿದ್ದು ಕಾಂಗ್ರೆಸ್ ಪಕ್ಷ ಈಗಾಗಲೇ ಆಪರೇಷನ್ ಹಸ್ತಕ್ಕೆ ಮುಂದಾಗಿದೆ.

ಬಿಡದಿ ಸೊಸೈಟಿ ಚುನಾವಣೆ ಕಾಂಗ್ರೆಸ್ ಹಾಗೂ ಜೆಡಿಎಸ್-ಬಿಜೆಪಿ ಪಕ್ಷಗಳ ಪಾಲಿಗೆ ಪ್ರತಿಷ್ಠೆಯ ಕಣವಾಗಿದೆ. ಈ ಚುನಾವಣೆಯಲ್ಲಿ ಮೈತ್ರಿ ಸಾಧಿಸಿರುವ ದಳಪತಿಗಳು ಮತ್ತು



ಕಮಲ ಪಕ್ಷದ ಮುಖಂಡರು ಒಮ್ಮತದಿಂದ ಬೆಂಬಲಿತ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ತೀರ್ಮಾನಿಸಿದ್ದಾರೆ. ಮತ್ತೊಂದೆಡೆ ಶಾಸಕ ಎಚ್.ಸಿ.ಬಾಲಕೃಷ್ಣರವರ ನೃತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ಸಭೆ ಕರೆದು ಗೆಲ್ಲುವ ಅಭ್ಯರ್ಥಿಗಳನ್ನು ಗುರುತಿಸಿ ಅಖಾಡಕ್ಕಿಳಿಸಲು ಸಿದ್ಧತೆ ನಡೆಸಿದ್ದಾರೆ.

ಬಿಡದಿಯ ಬಾನಂದೂರು ರಸ್ತೆಯಲ್ಲಿರುವ ಛತ್ರದ ಬಿ.ಜಿ.ಎಸ್ ಪದವಿ ಪೂರ್ವ ಕಾಲೇಜಿನಲ್ಲಿ ಏ.12ರಂದು ಸಂಘದ ಮುಂದಿನ 5 ವರ್ಷಗಳ ಅವಧಿಗೆ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆ ನಡೆಯಲಿದೆ.

ಬಿಡದಿಯ ಸಂಘದ ಕಚೇರಿಯಲ್ಲಿ ನಾಮಪತ್ರ ಸ್ವೀಕಾರ ಪ್ರಕ್ರಿಯೆ ಆರಂಭವಾಗಿದ್ದು, ಜೆಡಿಎಸ್-ಬಿಜೆಪಿ ಬೆಂಬಲಿತ ಅಭ್ಯರ್ಥಿಗಳಾಗಿ ಜಿಪಂ ಮಾಜಿ ಸದಸ್ಯ ಎಚ್.ಎಲ್. ಚಂದ್ರು, ಚಿಕ್ಕಣ್ಣಯ್ಯ ಉಮೇದುವಾರಿಕೆ ಸಲ್ಲಿಸಿದ್ದಾರೆ. ಸಂಘದ ಮಾಜಿ ಅಧ್ಯಕ್ಷ ವಾಜರಹಳ್ಳಿ ಮಹೇಶ್ ಮತ್ತು ಶೇಷಗಿರಿಹಳ್ಳಿಯ ದೊಡ್ಡರೇವಯ್ಯ ಕಾಂಗ್ರೆಸ್ ಬೆಂಬಲಿತರಾಗಿ ಹಾಗೂ ಅಮ್ ಆದ್ಮಿ ಪಕ್ಷದ ಬೆಂಬಲಿತ ಅಭ್ಯರ್ಥಿಯಾಗಿ ಶಿವಣ್ಣ ಅವರುಗಳು ಬುಧವಾರ ಉಮೇದುವಾರಿಗೆ ಸಲ್ಲಿಸಿದ್ದಾರೆ.

ಕೈ ವಶಕ್ಕೆ ಕಸರತ್ತು ಆರಂಭ:

ಬಿಡದಿ ಸೊಸೈಟಿಯನ್ನು ಕೈ ವಶ ಮಾಡಿಕೊಳ್ಳಲು ಶಾಸಕ ಎಚ್.ಸಿ.ಬಾಲಕೃಷ್ಣ ಅವರೊಂದಿಗೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಾಣಕಲ್ ನಟರಾಜ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಂಮರೇಹಳ್ಳಿ ಮಂಜು, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎಲ್.ಚಂದ್ರಶೇಖರ್, ಕೆಪಿಸಿಸಿ ಸದಸ್ಯ ಬ್ಯಾಟಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗಂಗಾಧರ್‌ಗೌಡ ಹಾಗೂ ಬಿಡದಿ ಪುರಸಭೆ ವಿಪಕ್ಷ ನಾಯಕ ಸಿ.ಉಮೇಶ್ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಇನ್ನಿಲ್ಲದ ಕಸರತ್ತು ನಡೆಸುತ್ತಿದ್ದಾರೆ.

ಆಪರೇಷನ್ ಹಸ್ತಕ್ಕೆ ಚಾಲನೆ:

ಈ ಬಾರಿ ಬಹುಮತದೊಂದಿಗೆ ಸಂಘದ ಅಧಿಕಾರ ಹಿಡಿಯಲು ಕಾಂಗ್ರೆಸ್ ಪಾಳಯ ಆಪರೇಷನ್ ಹಸ್ತಕ್ಕೂ ಮುಂದಾಗಿದೆ. ಇದರ ಭಾಗವಾಗಿ ಮಂಚನಾಯಕನಹಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ವೆಂಕಟೇಶ್, ಮಾಜಿ ಸದಸ್ಯ ರವಿಕುಮಾರ್, ಶೇಷಗಿರಿಹಳ್ಳಿ ಗ್ರಾಮದ ಮುಖಂಡರಾದ ಮಂಜುನಾಥ್, ಬಾಲಾಜಿ ಹಾಗೂ ಭೈರಾಗಿ ಕಾಲೋನಿ ಗ್ರಾಪಂ ಮಾಜಿ ಸದಸ್ಯ ಕೆಂಗಲ್ ಹನುಮಂತಯ್ಯ ಅವರು ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

ಚುನಾವಣೆ ವೇಳೆಗೆ ಮತ್ತಷ್ಟು ಜೆಡಿಎಸ್-ಬಿಜೆಪಿ ಮುಖಂಡರು ಕೈ ಪಾಳಯ ಸೇರುವ ಸಾಧ್ಯತೆಗಳಿವೆ ಎನ್ನಲಾಗಿದೆ.

# ಸಿದ್ದಗಂಗಾ ಆಸ್ಪತ್ರೆಯಲ್ಲಿ ಉಚಿತ ಬೃಹತ್ ವೈದ್ಯಕೀಯ ಶಿಬಿರ:

# 500ಕ್ಕೂ ಹೆಚ್ಚು ಜನರಿಗೆ ಆರೋಗ್ಯ ಸೇವೆ

ತುಮಕೂರು: ಪರಮಪೂಜ್ಯ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಶಿವಯೋಗಿಗಳವರ 119ನೇ ಜಯಂತ್ಯೋತ್ಸವದ ಅಂಗವಾಗಿ ನಗರದ ಸಿದ್ದಗಂಗಾ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಸೂಪರ್ ಸ್ಪೆಷಾಲಿಟಿ ಸಮಾಲೋಚನಾ ಶಿಬಿರವು ಅತ್ಯಂತ ಯಶಸ್ವಿಯಾಗಿ ಜರುಗಿತು.



ಕಾರ್ಯಕ್ರಮದ ಆರಂಭದಲ್ಲಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿರುವ ಶ್ರೀಗಳ ಪುತ್ಥಳಿಗೆ ವಿಶೇಷ ಪೂಜೆ ಹಾಗೂ ಪುಷ್ಪ ನಮನಗಳನ್ನು ಸಲ್ಲಿಸುವ ಮೂಲಕ ವೈದ್ಯಕೀಯ ಸೇವಾ ಕಾರ್ಯಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಲಾಯಿತು.

ನಿರ್ದೇಶಕರಾದ ಡಾ.ಎಸ್.ಪರಮೇಶ್ ಮಾತನಾಡಿ ಶ್ರೀಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಉತ್ತಮ ಶಿಕ್ಷಣ ಮತ್ತು ಆರೋಗ್ಯ ಲಭಿಸಬೇಕೆಂದು ಸದಾ ಆಶಿಸುತ್ತಿದ್ದರು. ಅವರ ಜಯಂತಿಯ ಶುಭ ಸಂದರ್ಭದಲ್ಲಿ ಇಂತಹ ಬೃಹತ್ ಶಿಬಿರವನ್ನು ಆಯೋಜಿಸಿರುವುದು ಪೂಜ್ಯರಿಗೆ ಸಲ್ಲಿಸುವ ನಿಜವಾದ ಭಕ್ತಿಯ ಸೇವೆಯಾಗಿದೆ ಎಂದರು.

ಪ್ರಾಚಾರ್ಯರಾದ ಡಾ.ಶಾಲಿನಿ ಮಾತನಾಡಿ ಶ್ರೀಗಳ ಆರೋಗ್ಯ ದಾಸೋಹವನ್ನ ಪ್ರತಿನಿತ್ಯ ಉಣಬಡಿಸುವ ನಮ್ಮ ಆಸ್ಪತ್ರೆ ಇಂದು ಸೂಪರ್ ಸ್ಪೆಷಾಲಿಟಿ ವಿಭಾಗದಲ್ಲಿಯೂ ಉಚಿತ ಸಮಾಲೋಚನೆ ನೀಡುತ್ತಿರುವುದು ನೂರಾರು ಜನರ ಆರೋಗ್ಯ ಕಾಳಜಿಗೆ ಸಹಕಾರಿಯಾಗಿದೆ ಇದರಿಂದ ಜನರು ಆರೋಗ್ಯವಂತರಾದರೆ ಅದೇ ನಮಗೆ ತೃಪ್ತಿ ಎಂದರು.

ಹೃದ್ರೋಗ ವಿಭಾಗದ ಮುಖ್ಯಸ್ಥರಾದ ಡಾ.ಶರತ್ ಕುಮಾರ್ ಮಾತನಾಡಿ ಎಲ್ಲಾ ಸೂಪರ್ ಸ್ಪೆಷಾಲಿಟಿ ವಿಭಾಗ ಈಗಾಗಲೇ ವಿಶ್ವದರ್ಜೆಯ ಸೇವೆಯನ್ನು ಸಾರ್ವಜನಿಕರಿಗೆ ತಲುಪಿಸುತ್ತಿದೆ. ಪೂಜ್ಯರ ಜನ್ಮದಿನದಂದು ಈ ಶಿಬಿರ ಆಯೋಜನೆ ನಮ್ಮ ವಿಭಾಗದ ಸೇವೆಯ ಮೌಲ್ಯ ಹೆಚ್ಚಿಸಿದೆ ಎಂದರು.

ಶಿಬಿರದಲ್ಲಿ ಸಾರ್ವಜನಿಕರಿಗೆ ಹೃದ್ರೋಗ ವಿಭಾಗದ ಕಾರ್ಡಿಯಾಲಜಿ, ಕಾರ್ಡಿಯೋ ಥೋರಾಸಿಕ್ ಮತ್ತು ವ್ಯಾಸ್ಕುಲರ್ ಸರ್ಜರಿ ತಜ್ಞರಿಂದ ಸಮಾಲೋಚನೆ ಒದಗಿಸಲಾಯಿತು. ಅಲ್ಲದೆ ನರರೋಗ ವಿಭಾಗದ ನ್ಯೂರಾಲಜಿ ಮತ್ತು ನ್ಯೂರೋಸರ್ಜರಿ, ಮೂತ್ರಪಿಂಡ ವಿಭಾಗದ ನೆಫ್ರಾಲಜಿ ಮತ್ತು ಯೂರಾಲಜಿ ತಜ್ಞರು ಸಹ ಲಭ್ಯವಿದ್ದರು. ಇವುಗಳ ಜೊತೆಗೆ ಗ್ಯಾಸ್ಟ್ರೋಎಂಟರಾಲಜಿ, ಪ್ಲಾಸ್ಟಿಕ್ ಸರ್ಜರಿ ಹಾಗೂ ಹಿರಿಯ ನಾಗರಿಕರ ಆರೋಗ್ಯ ಸಮಸ್ಯೆಗಳಿಗಾಗಿ ಜೆರಿಯಾಟ್ರಿಕ್ಸ್ ವಿಭಾಗದ ತಜ್ಞವೈದ್ಯರು ರೋಗಿಗಳ ಸಮಾಲೋಚನೆಯಲ್ಲಿ ಭಾಗವಹಿಸಿದ್ದರು.

ಪ್ರಾಚಾರ್ಯರಾದ ಡಾ.ಶಾಲಿನಿ ಎಂ , ವೈದ್ಯಕೀಯ ಅಧೀಕ್ಷಕ ಡಾ.ನಿರಂಜನಮೂರ್ತಿ, ಹಿರಿಯ ಹೃದ್ರೋಗ ತಜ್ಞ ಡಾ.ಶರತ್ ಕುಮಾರ್ ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು,ವೈದ್ಯರು, ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಹಾಜರಿದ್ದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಕನಕಪುರ ತಾಲ್ಲೂಕು ಘಟಕದವತಿಯಿಂದ, ಬಮೂಲ್ ಅಧ್ಯಕ್ಷ ಡಿ ಕೆ ಸುರೇಶ್ ಅವರನ್ನು ಬೆಂಗಳೂರು ಸಹಕಾರ ಹಾಲು ಒಕ್ಕೂಟ, ಕನಕಪುರ ಶಿಬಿರ ಕಛೇರಿಯ ಶಿವನಹಳ್ಳಿ ಮೆಘಾ ಡೈರಿಯಲ್ಲಿ ಆಯೋಜಿಸಲಾಗಿದ್ದ ಹಾಲು ಉತ್ಪಾದಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಬೇಡಿಕೆಯಲ್ಲಿ ಸನ್ಮಾನಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಎಸ್ ರವಿ, ಬಮೂಲ್ ನಿರ್ದೇಶಕ ಹರೀಶ್,ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಟಿ ಸಿ ವೆಂಕಟೇಶ, ಉಪಾಧ್ಯಕ್ಷ ಹೆಚ್ ಪಿ ರಾಜು, ಪ್ರಧಾನ ಕಾರ್ಯದರ್ಶಿ ಕೆ ವಿ ಮನು, ಜಿಲ್ಲಾ ಉಪಾಧ್ಯಕ್ಷ ಶಿವಲಿಂಗಯ್ಯ, ಜಿಲ್ಲಾ ನಿರ್ದೇಶಕ ಎಸ್ ವಿ ಗಿರೀಶ, ಪದಾಧಿಕಾರಿಗಳಾದ ಜಿ ಶಾಂತರಾಜ್, ಕೆ ಆರ್ ಉಮಾಶಂಕರ್, ಪತ್ರಕರ್ತರಾದ ಜಯರಾಮ್ ನಾಯ್ಕ್, ಲಿಂಗೇಶ್

# "ಬೇಸಿಗೆ ರಜೆಯಲ್ಲಿ ನೀರಿನಲ್ಲಿ ಈಜಲು ಹೊರ ಹೋಗುವ ಮಕ್ಕಳ ಬಗ್ಗೆ ಪೋಷಕರು ಎಚ್ಚರ ವಹಿಸಿ



ವರದಿ. ಪಿ.ಜಿ.ನಾಗರಾಜ್

ತಿಪಟೂರು:ಬೇಸಿಗೆ ರಜೆ ಆರಂಭದ ಇನ್ನೆಲೆಯಲ್ಲಿ ಬೇಸಿಗೆ ಬಿಸಿಲ ತಾಪ ಏರುತ್ತಿರುವ ಬೆನ್ನಲ್ಲೇ ಮಕ್ಕಳು ಬಿಸಿಲಿನ ತಾಪನ್ನು ತಾಳಲಾರದೆ ಆಟ ಆಡುವ ನೆಪದಲ್ಲಿ ತಣ್ಣನೆಯ ನೀರಿನಲ್ಲಿ ಸ್ವಲ್ಪ ಸಮಯ ಕಾಲ ಕಳೆಯಬೇಕು ಎನ್ನುವ ಹಂಬಲದೊಂದಿಗೆ ನೀರಿನಲ್ಲಿ ಈಜಲು ಹೋಗುವ ಸಾಧ್ಯತೆ ಹೆಚ್ಚಾಗಿ ಇರುತ್ತದೆ. ಈ ಸಂದರ್ಭದಲ್ಲಿ ಅಚತುರ್ಯ ಘಟನೆಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಆದ್ದರಿಂದ ಪೋಷಕರೇ ಚಿಕ್ಕ ಮಕ್ಕಳ ಚಲನವಲನಗಳ ಬಗ್ಗೆ ಎಚ್ಚರದಿಂದ ಜಾಗರೂಕರಾಗಿರಿ ಯಾವುದೇ ಕಾರಣಕ್ಕೂ ಮಕ್ಕಳನ್ನು ಕರೆ -ಕಟ್ಟೆಗಳು ಹಾಗೂ ಕೃಷಿ ಹೊಂಡಗಳು ಬಾವಿಗಳ ಬಳಿ ಹೋಗದಂತೆ ತಡೆಯ ಬೇಕು ಎಂದು ಶ್ರೀ ಪರದೇಶಿ ಕೇಂದ್ರ ಸ್ವಾಮೀಜಿ ಹಿರಿಯ ಪ್ರಾಥಮಿಕ ಶಾಲೆ ರಂಗಾಪುರ ಶಾಲೆಯ ಮುಖ್ಯ ಶಿಕ್ಷಕರಾದ ಸಿ ಎಂ ಕೆ ಕುಮಾರ್ ರವರು ತಿಳಿಸಿದರು.

## ಮಕ್ಕಳ ವಿಚಾರದಲ್ಲಿ ತಂದೆ ತಾಯಿಗಳು ಕ್ರಮವಹಿಸಿ

ಬೇಸಿಗೆ ಕಾಲ ಪ್ರಾಂಭವಾಗಿದ್ದು ಈ, ಹಿನ್ನೆಲೆಯಲ್ಲಿ ಶಾಲೆಗಳಿಗೆ ಎರಡು ತಿಂಗಳ ರಜೆ ಘೋಷಿಸಲಾಗಿದೆ ಬೇಸಿಗೆ ರಜೆ ಬಂತೆಂದರೆ ಮಕ್ಕಳ ಪೋಷಕರು ಮಕ್ಕಳನ್ನು ಕರೆದುಕೊಂಡು ಹಳ್ಳಿಯಲ್ಲಿ ಇರುವ ಅಜ್ಜಿ- ತಾತನ ಮನೆಗೆ ಹೋಗುವುದು ತಮ್ಮ ಸಂಬಂಧಿಕರ ಮನೆಗಳಿಗೆ ಮತ್ತು ತಮ್ಮ ತಮ್ಮ ಕುಟುಂಬಕ್ಕೂ ಹತ್ತಿರವಾಗಿರುವ ಸ್ನೇಹಿತರ ಮನೆಗಳಿಗೆ ಅಥವಾ ಬೇರೆ ಬೇರೆ ಊರುಗಳಿಗೆ ಹೋಗಿ ಎಲ್ಲರೊಂದಿಗೆ ನಗುನಗುತ್ತಲೇ ಸ್ವಲ್ಪ ದಿನಗಳ ಕಾಲ ಕಳೆಯುವುದಕ್ಕೆ ಹೋಗಿರುತ್ತಾರೆ. ಏಕೆಂದರೆ ಬೇಸಿಗೆ ಕಾಲ ತಾಪ ಹೆಚ್ಚುತ್ತಿರುವ ಬೆನ್ನಲ್ಲೇ ತಂಪು ಪಡೆಯಲು ಮಕ್ಕಳು ಕೆರೆ -ಕಟ್ಟೆಗಳು ತೋಟದ ಹೊಲದಲ್ಲಿ ಇರುವ ಕೃಷಿ ಹೊಂಡಗಳು ಮತ್ತು ಬಾವಿಯಲ್ಲಿ ನೀರು ಕುಡಿಯುವುದಕ್ಕೆ ಅಥವಾ ಅಧಿಕ ಬಿಸಿಲ್ ತಾಪ ಹೆಚ್ಚುತ್ತಿರುವ ಬೆನ್ನಲ್ಲೇ ಮಕ್ಕಳು ನೀರಿನಲ್ಲಿ ಇಳಿದು ಈಜಲು ಹೋಗುವ ಸಾಧ್ಯತೆಗಳು ಇರುತ್ತದೆ. ಮಕ್ಕಳ ವಿಚಾರದಲ್ಲಿ ಹಲವಾರು ಘಟನೆಗಳನ್ನು ನಾವು ಪತ್ರಿಕೆಗಳಲ್ಲಿ ಹಾಗೂ ದೃಶ್ಯ ಮಾಧ್ಯಮಗಳಲ್ಲಿ ವೀಕ್ಷಿಸಿದ್ದೇವೆ ಬೇಸಿಗೆ ಕಾಲದಲ್ಲಿ ಬೇಸಿಗೆ ಶಿಬಿರ ಎಂಬುದನ್ನು ಏರ್ಪಡಿಸಿದರೆ ಮಕ್ಕಳಿಗೆ ಆಟ ಆಡಿಸುವುದು ಇತ್ಯಾದಿ ಆಟಗಳಲ್ಲಿ ಮಕ್ಕಳು ತೊಡಗಿಕೊಂಡರೆ ಉತ್ತಮರಾಗುತ್ತಾರೆ ಹಾಗೂ ಉತ್ತಮ ಒಬ್ಬ ವಿದ್ಯಾರ್ಥಿನಿ ಆಗುತ್ತಾನೆ ಮಕ್ಕಳ ವಿಚಾರದಲ್ಲಿ ಪೋಷಕರು ಮಕ್ಕಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಅವಹೇಳನಕಾರಿ ಮಾಡಬಾರದು ರಜೆ ದಿನಗಳಲ್ಲಿ ತಮ್ಮ ಮಕ್ಕಳು ಎಲ್ಲಿಗೆ ಹೋಗುತ್ತಾರೆ ಎಂಬುದು ಪೋಷಕರು ಅರ್ಥ ಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಆಚಾತುರ್ಯ ಘಟನೆಗಳು ಸಂಭವಿಸುತ್ತದೆ ಅಂತಹ ಘಟನೆಗಳು ನಡೆಯದಂತೆ ಮಕ್ಕಳ ಬಗ್ಗೆ ಪೋಷಕರು ಹೆಚ್ಚಿನ ಗಮನ ಹರಿಸಬೇಕು ಎಂದರು.





ಬೇಸಿಗೆ ರಜೆ ಹಿನ್ನೆಲೆಯಲ್ಲಿ ಪೋಷಕರು ಮಕ್ಕಳ ಜೊತೆಯಲ್ಲಿ ಇರಬೇಕು ಜಾತ್ರೆಗಳಿಗೆ ಕರೆದುಕೊಂಡು ಹೋದ ಸಂದರ್ಭದಲ್ಲಿ ಮಕ್ಕಳಿಗೆ ತಿಂಡಿ ತಿನಿಸುಗಳ ಬಗ್ಗೆ ಎಚ್ಚರ ಕ್ರಮ ವಹಿಸಬೇಕು ಹಾಗೂ ಬೇಸಿಗೆ ರಜೆ ಇರುವ ಕಾರಣದಿಂದ ಮಕ್ಕಳು ಹೊರಗೆ ಹೋಗಿ ಕೊಳವೆ ಬಾವಿ ಕೆರೆಗಳಲ್ಲಿ ಈಜಲು ಪ್ರಯತ್ನ ಮಾಡುತ್ತಾರೆ ಮಕ್ಕಳ ಬಗ್ಗೆ ಹೆಚ್ಚಿನ ಕ್ರಮವನ್ನು ವಹಿಸಬೇಕು

ಪೋಷಕರು :ರಂಗನಾಥ್, ಗಂಗನಘಟ್ಟ "

ಬೇಸಿಗೆ ಹಿನ್ನೆಲೆಯಲ್ಲಿ ಎರಡು ತಿಂಗಳು ಶಾಲೆಗಳಿಗೆ ರಜೆ ಇರುವ ಸಂದರ್ಭದಲ್ಲಿ ಮಕ್ಕಳನ್ನು ಪೋಷಕರು ತಮ್ಮ ಮನೆಗಳಲ್ಲಿ ಇರುವಾಗ ಮಕ್ಕಳು ಹೊರಹೋಗದಂತೆ ಅಥವಾ ತಾತ ಅಜ್ಜಿಯ ಮನೆಗಳಿಗೆ ಕಳಿಸುವ ಮುಂಚೆ ಮಕ್ಕಳ ಬಗ್ಗೆ ಕ್ರಮ ವಹಿಸಬೇಕು ಬೇಸಿಗೆ ಬಿಸಿಲಿನ ತಾಪಕೆ ಸ್ನೇಹಿತರ ಜೊತೆಯಲ್ಲಿ ಮಕ್ಕಳು ಪೋಷಕರ ಮನೆಗಳಿಂದ ತಾತ ಅಜ್ಜಿ ಮನೆಗಳಿಂದ ಅಥವಾ ಬಂದು ಬಾಂಧವರ ಮನೆಗಳಿಂದ ಆಟವಾಡುವ ಸಮಯದಲ್ಲಿ ಬಿಸಿಲಿನ ತಾಪ ತಾಳಲಾರದೆ ಸ್ನೇಹಿತರ ಜೊತೆಯಲ್ಲಿ ಕೆರೆಗೆ ಕೃಷಿಗೊಂಡ ಬಾವಿಗಳ ಬಳಿ ಹೋಗದಂತೆ ಕ್ರಮ ವಹಿಸಬೇಕು ಮಕ್ಕಳ ವಿಚಾರದಲ್ಲಿ ನಡೆಯುವ ಆಚಾತುರ್ಯಗಳನ್ನು ತಪ್ಪಿಸಿ ಪೋಷಕರು ಮಕ್ಕಳನ್ನು ಕಾಪಡಬೇಕು

ತಾರಾಮಣಿ
ತಿಪಟೂರು ಶಿಕ್ಷಣಾಧಿಕಾರಿ

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ನಾಗವಲ್ಲಿ ಶಾಲೆಗೆ ಟೊಯೊಟ ಕಂಪನಿ 3 ಕೋಟಿ ರೂ.

## ಶಾಲೆ ಸೌಕರ್ಯ ವೃದ್ಧಿಗೆ ಸಂಸ್ಥೆ ನೆರವು; ಶಾಸಕ ಸುರೇಶ್‌ಗೌಡ

ತುಮಕೂರು :ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ನಾಗವಲ್ಲಿಯ ಕೆಪಿಎಸ್ ಶಾಲೆಗೆ ಭೇಟಿ ನೀಡಿದ್ದ ಬೆಂಗಳೂರಿನ ಪ್ರತಿಷ್ಠಿತ ಟೊಯೊಟಾ ಕಿರ್ಲೋಸ್ಕರ್ ಕಂಪನಿಯ ಅಧಿಕಾರಿಗಳು ಶಾಲೆಯಲ್ಲಿ ಮೂಲ ಸೌಕರ್ಯ ಕಲ್ಪಿಸಲು ಅಗತ್ಯವಾದ ಮೂರು ಕೋಟಿ ರೂಪಾಯಿ ಅನುದಾನವನ್ನು ಕೊಡಲು ಒಪ್ಪಿದ್ದಾರೆ ಎಂದು ಕ್ಷೇತ್ರದ ಬಿಜೆಪಿ ಶಾಸಕ ಬಿ. ಸುರೇಶ್ ಗೌಡರು ತಿಳಿಸಿದ್ದಾರೆ.

ಕಂಪೆನಿಯ ಅಧಿಕಾರಿಗಳಾದ ಜನರಲ್ ಮ್ಯಾನೇಜರ್ ಕಿರಣ್, ಮ್ಯಾನೇಜರ್ ಪ್ರಶಾಂತ್ ಹಾಗೂ ರಮೇಶ್ ಅವರು ತಮ್ಮ ಜತೆಗೆ ಕ್ಷೇತ್ರದ ಮುಸ್ಕಲ್, ಹೊನ್ನುಡಿಕೆ ಹಾಗೂ ಹೊನಸಗೆರೆ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಿದರು. ಈಗಾಗಲೇ ಸರ್ಕಾರದ ಅನುದಾನ ಮತ್ತು ಶಾಸಕರ ನಿಧಿ ನೇರಿಒಟ್ಟು 3.5 ಕೋಟಿ ರೂಪಾಯಿ ಅನುದಾನದಡಿ ಈ ಶಾಲೆಯಲ್ಲಿ 16 ಕೊಠಡಿಗಳ ನಿರ್ಮಾಣ ನಡೆದಿದೆ ಎಂದು ಶಾಸಕರು ತಿಳಿಸಿದ್ದಾರೆ.

ನಂತರ ನಾಗವಲ್ಲಿಯ ಕೆಪಿಎಸ್ ಶಾಲೆಗೆ ಭೇಟಿ ನೀಡಿಅಲ್ಲಿ ಸುಸಜ್ಜಿತವಾದ 12 ನೂತನ ಶಾಲಾ ಕೊಠಡಿಗಳು, ಕಂಪ್ಯೂಟರ್‌ಗಳು,





ಪ್ರಯೋಗಾಲಯದ ಸಾಮಗ್ರಿಗಳು, ಗ್ರಂಥಾಲಯದ ಪುಸ್ತಕಗಳು, ಮತ್ತು ಶಿಕ್ಷಕರಿಗೆ ಲ್ಯಾಪ್ ಟ್ಯಾಪ್, ಎಲ್‌ಕೆಜಿ, ಯುಕೆಜಿ ಮಕ್ಕಳಿಗೆ ಆಟಿಗೆ ಸಾಮಾನುಗಳನ್ನು ಒದಗಿಸಲು ಮೂರು ಕೋಟಿ ರೂಪಾಯಿಗಳನ್ನು ಸಿಎಸ್‌ಆರ್ ನಿಧಿಯಡಿ ಒದಗಿಸಲು ಒಪ್ಪಿಕೊಂಡರು ಎಂದು ಶಾಸಕರು ಹೇಳಿದ್ದಾರೆ.

ನಾಗವಲ್ಲಿ ಶಾಲೆಯನ್ನು ಇಡೀ ರಾಜ್ಯದಲ್ಲಿ ಒಂದು ಮಾದರಿ ಶಾಲೆಯನ್ನಾಗಿ ರೂಪಿಸಬೇಕು ಎನ್ನುವುದು ತಮ್ಮ ಕನಸು. ನನ್ನ ಕ್ಷೇತ್ರದ ಮಕ್ಕಳು ಜಗತ್ತಿನಲ್ಲಿ ಎಲ್ಲಿಯೇ ಹೋಗಲಿ ಅಲ್ಲಿ ತಲೆ ಎತ್ತಿ ಆತ್ಮ ಗೌರವದಿಂದ ನಿಲ್ಲಬೇಕು ಮತ್ತು ಯಾವುದೇ ಮಹತ್ವದ ಕೆಲಸ ಮಾಡಲು ತಾವು ಸಿದ್ಧ ಎಂಬುದನ್ನು ಸಾಬೀತು ಮಾಡಬೇಕು. ಆ ಬಗೆಯ ಶಿಕ್ಷಣವನ್ನು ಸರ್ಕಾರಿ ಶಾಲೆಗಳಲ್ಲಿ ಒದಗಿಸುವುದು ತಮ್ಮ ಉದ್ದೇಶವಾಗಿದೆ ಎಂದು ಅವರು ತಿಳಿಸಿದ್ದಾರೆ.

ಇದಕ್ಕೆ ಪೂರಕವಾಗಿ ಇದೀಗ ಟೊಯೊಟ ಕಂಪೆನಿಯ ಉದಾರ ನೆರವಿನಿಂದ ಶಾಲೆಯು ಸಕಲ ಮೂಲ ಸೌಕರ್ಯಗಳನ್ನು ಹೊಂದುವುದು ಶತಃಸಿದ್ಧ. ಇದರಿಂದಗ್ರಾಮೀಣ ಭಾಗದಲ್ಲಿ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆಯುವ ರೀತಿಯಲ್ಲಿ ಸರ್ಕಾರಿ ಶಾಲೆಯನ್ನು ನಿರ್ಮಿಸಬೇಕು ಮತ್ತು ಬಡವರ ಮಕ್ಕಳಿಗೆ ಖಾಸಗಿ ಶಾಲೆಗಳಿಗೆ ಸಮಾನಾಂತರವಾದ ಸೌಕರ್ಯಗಳನ್ನು ಒದಗಿಸಬೇಕು ಎನ್ನುವ ತಮ್ಮ ಕನಸು ಈಡೇರುವ ಹಂತಕ್ಕೆ ತಲುಪಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ನೆಲಸಿರುವ ವಿವಿಧ ಖಾಸಗಿ ಕಂಪೆನಿಗಳು ಹೀಗೆ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ಮುಂದೆ ಬರುತ್ತಿರುವುದು ಅತ್ಯಂತ ಪ್ರಶಂಸಾರ್ಹ ಸಂಗತಿ. ಈಗಾಗಲೇ ತಮ್ಮ ಕ್ಷೇತ್ರದಲ್ಲಿ ಫಿನ್ಲೆಂಡ್‌ನ ಇನ್‌ಕ್ಯಾಪ್ ಕಂಪೆನಿ, ಬೆಂಗಳೂರಿನ ಬಾಷ್ ಕಂಪೆನಿ, ಜಪಾನ್‌ನ ಟೀಮ್ಯಾಕ್ ಕಂಪೆನಿ, ಸಾಯಿ ಗಾರ್ಮೆಂಟ್ಸ್, ಕಾಪ್ ರಾಡ್, ಟಿವಿಎಸ್ ಮತ್ತು ಜಿಂದಾಲ್ ಅಲ್ಯುಮಿನಿಯಂ ಕಂಪೆನಿಗಳು ಇದೇ ರೀತಿ ತಮ್ಮ ಸಿಎಸ್‌ಆರ್ ನಿಧಿಯಡಿ ನನ್ನ ಕ್ಷೇತ್ರದ ವಿವಿಧ ಸರ್ಕಾರಿ ಶಾಲೆಗಳ ಮೂಲ ಸೌಕರ್ಯಗಳ ಉನ್ನತೀಕರಣಕ್ಕೆ ಸಹಾಯ ಮಾಡುತ್ತಿವೆ ಎಂದು ಸುರೇಶ್‌ಗೌಡ ನೆನಪಿಸಿಕೊಂಡಿದ್ದಾರೆ.

ತಮ್ಮ ಕ್ಷೇತ್ರದ ವಿವಿಧ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿ ಒದಗಿಸಲಾಗಿರುವ ಮೂಲಸೌಕರ್ಯಗಳ ಕುರಿತು ತೃಪ್ತಿ ವ್ಯಕ್ತಪಡಿಸಿದ ಟೊಯೊಟ ಕಂಪನಿಯ ಅಧಿಕಾರಿಗಳು ನಾಗವಲ್ಲಿ ಶಾಲೆಯನ್ನು ಇಡೀ ರಾಜ್ಯದಲ್ಲಿ ಒಂದು ಅತ್ಯುತ್ತಮ ಶಾಲೆ ಮಾಡುವ ತಮ್ಮ ಸಂಕಲ್ಪಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಅವರಿಗೆ ಕ್ಷೇತ್ರದ ಜನತೆಯ ಪರವಾಗಿ ತಾವು ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ತುಮಕೂರಿನಲ್ಲಿ ನಿರಂಕುಶ ರಂಗ ತಂಡ 3 ನೇ ವರ್ಷದ "ಆಡು ಬಾ ನನ್ನ ಕಂದ"ಮಕ್ಕಳ ಬೇಸಿಗೆ ಶಿಬಿರ

ಓದು ಬರಹದ ಕಡೆ ಮಕ್ಕಳನ್ನು ರೂಪಿಸುವ ಜೊತೆಗೆ ಸಾಂಸ್ಕೃತಿಕ, ಕಲಾತ್ಮಕ ವ್ಯಕ್ತಿತ್ವಗಳನ್ನಾಗಿ ಮಾಡಬೇಕು ಎನ್ನುವ ಆಸೆ ನಿಮ್ಮದಾಗಿದ್ದರೆ ನಿಮ್ಮೂರಿನಲ್ಲಿಯೇ ಈಗ ಸಾಣೇಹಳ್ಳಿ .ನೀನಾಸಂ ರಂಗಾಯಣ ಪದವೀಧರರಿಂದ 'ಆಡು ಬಾ ನನ್ನ ಕಂದ' ಎನ್ನುವ ಮಕ್ಕಳ ಬೇಸಿಗೆ ರಂಗ ಶಿಬಿರ ಪ್ರಾರಂಭವಾಗುತ್ತಿದೆ ಬನ್ನಿ ನೋಂದಾಯಿಸಿಕೊಳ್ಳಿ.

30 ದಿನಗಳ ಕಾಲ –ಆಡು ಬಾ ನನ್ನ ಕಂದ ಮಕ್ಕಳ ಬೇಸಿಗೆ ಶಿಬಿರ ನಡೆಯುತ್ತಿದ್ದು ಶಿಬಿರದಲ್ಲಿ ಅಭಿನಯ ತರಗತಿ. ರಂಗ ವ್ಯಾಯಾಮ. ರಂಗಾಟಗಳು. ರಂಗಗೀತೆ. ಜಾನಪದ ಗೀತೆ. ಕೋಲಾಟ ನಾಟಕಗಳ ಗ್ರಹಿಕೆ. ಸಾಂಸ್ಕೃತಿಕ ವ್ಯಕ್ತಿತ್ವ ವಿಕಸನ. ಇಂತಹ ಎಲ್ಲಾ ಬಗೆಯ ಕಲೆಗಳ ಬಗ್ಗೆ ಮಕ್ಕಳಿಗೆ ಹೇಳಿಕೊಡಲಾಗುತ್ತದೆ.ಹಾಗು ಕೂನೆಯ ದಿನ ಶಿಬಿರದ ಮಕ್ಕಳಿಂದ ನಾಟಕದ ಪ್ರದರ್ಶನವಾಗುತ್ತದೆ 07ರಿಂದ15 ವರ್ಷದೊಳಗಿನ ಮಕ್ಕಳಿಗೆ ಮಾತ್ರ ಈ ಶಿಬಿರದಲ್ಲಿ ಕಲಿಕೆ ಅವಕಾಶ ಪ್ರತಿದಿನ ಬೆಳಿಗ್ಗೆ 10:00 ರಿಂದ 3:00ವರೆಗೆ ತರಗತಿ ನಡೆಸಲಾಗುತ್ತದೆ .ಆಸಕ್ತಿ ಉಳ್ಳವರು ಏಪ್ರಿಲ್ 5ರ ಒಳಗೆ ನೋಂದಾಯಿಸಿಕೊಳ್ಳಿ ಏಪ್ರಿಲ್ 11ರಿಂದ ತರಗತಿಗಳು ಪ್ರಾರಂಭವಾಗುತ್ತದೆ .ಶಿಬಿರದ ತರಗತಿಗಳನ್ನು' ಅನನ್ಯ ಪಿ ಯು ಕಾಲೇಜು ಆವರಣದಲ್ಲಿ ನಡೆಸಲಾಗುತ್ತದೆ ಸಾಣೇಹಳ್ಳಿ ಪದವೀಧರ ಹೇಮಂತ್ ರವರು ತಿಳಿಸಿದ್ದಾರೆ ಹೆ ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ : 8884211659. 7975914796

ಸ್ಥಳ. ಅನನ್ಯ ಪಿ ಯು ಕಾಲೇಜು ಅಶೋಕ ರಸ್ತೆ ತುಮಕೂರು



ಕರ್ನಾಟಕ ಮಾದರ ಮಹಾಸಭಾ ತುಮಕೂರು ಜಿಲ್ಲಾ ಶಾಖೆಯ ನಿವೃತ್ತ ಅಧಿಕಾರಿಗಳು ಹಾಗೂ ನೌಕರರ ಮಾದರ ಮಹಾಸಭಾ ಜಿಲ್ಲಾ ಸಂಚಾಲಕರನ್ನಾಗಿ ನಿವೃತ್ತ ಶಿಕ್ಷಕ ನರಸಿಂಹರಾಜು ರವರನ್ನು ಮಹಾಸಭಾದ ಜಿಲ್ಲಾಧ್ಯಕ್ಷ ವೈ.ಹೆಚ್. ಹುಚ್ಚಯ್ಯ ನೇಮಕ ಮಾಡಿ ಆದೇಶ ಪತ್ರ ವಿತರಿಸಿದರು.



ತುಮಕೂರಿನ ಹೊರಪೇಟೆಯಲ್ಲಿರುವ ಲೂರ್ದುಮಾತೆ ದೇವಾಲಯದಲ್ಲಿ ಶುಭ ಶುಕ್ರವಾರವನ್ನು ಏಸುಕ್ರಿಸ್ತನ ಶಿಲುಬೆಯನ್ನು ಚರ್ಚ್ ಸುತ್ತ ಕೊಂಡೊಯ್ದು ಪೂಜೆ ನೆರವೇರಿಸುವ ಮೂಲಕ ಆಚರಿಸಲಾಯಿತು.



ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ–ಆಪರೇಟಿವ್‌ನ ನೂತನ ಉಪಾಧ್ಯಕ್ಷರಾಗಿ ನೇಮಕಗೊಂಡಿರುವ ಶ್ರೀ ಲಕ್ಷ್ಮೀನಾರಾಯಣ ಸ್ವಾಮಿ ದೇವಸ್ಥಾನ ಸಮಿತಿ ಕಾರ್ಯದರ್ಶಿ ಡಿ.ಎ.ಮೋಹನ್ ಅವರನ್ನು ಸಮಾಜ ಸೇವಕ ನಟರಾಜ್ ಮತ್ತು ಕವಿ ವಿ.ಪಿ.ಕೃಷ್ಣಮೂರ್ತಿ ಅಭಿನಂದಿಸಿ ಗೌರವಿಸಿದರು.

## ಏ.10 ರಿಂದ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರ

ತುಮಕೂರು: ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ಟ್ರಸ್ಟ್ ವತಿಯಿಂದ ಏಪ್ರಿಲ್ 10 ರಿಂದ ಮೇ 10ರವರೆಗೆ ತುಮಕೂರು ಜಿಲ್ಲೆಯ ಗುಬ್ಬಿ ಟೌನ್‌ನಲ್ಲಿರುವ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

ಈ ಶಿಬಿರಕ್ಕೆ ಆಸಕ್ತ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯನ್ನು ಡಾ: ಗುಬ್ಬಿ ವೀರಣ್ಣ ರಂಗಮಂದಿರ, ಗುಬ್ಬಿ ಟೌನ್ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಏಪ್ರಿಲ್ 9ರೊಳಗೆ ಸಲ್ಲಿಸಬೇಕು.

ತರಬೇತಿ ಶಿಬಿರವನ್ನು ಪ್ರತಿ ದಿನ ಬೆಳಗ್ಗೆ ಹಾಗೂ ಮಧ್ಯಾಹ್ನದ ಅವಧಿಯಲ್ಲಿ ಆಯೋಜಿಸಲಾಗುವುದು. ಶಿಬಿರದಲ್ಲಿ 8 ರಿಂದ 14 ವರ್ಷ ವಯೋಮಾನದ ಮಕ್ಕಳು ಭಾಗವಹಿಸಬಹುದಾಗಿದೆ. ಮಕ್ಕಳ ಜನನ ಪ್ರಮಾಣ ಪತ್ರ ಲಗತ್ತಿಸಬೇಕು. ಶಿಬಿರದಲ್ಲಿ ಭಾಗವಹಿಸಲು 1,500 ರೂ.ಗಳ ಶುಲ್ಕವನ್ನು ನಿಗದಿಪಡಿಸಲಾಗಿದ್ದು, ಭಾಗವಹಿಸುವ ಮಕ್ಕಳು ಬೆಳಗಿನ / ಮಧ್ಯಾಹ್ನದ ತಿಂಡಿ / ಉಪಹಾರವನ್ನು ಮತ್ತು ಕುಡಿಯುವ ನೀರನ್ನು ಸ್ವಯಂ ವ್ಯವಸ್ಥೆ ಮಾಡಿಕೊಳ್ಳಬೇಕು. ಆಯ್ಕೆಯಾದ ಮಕ್ಕಳು ಟ್ರಸ್ಟ್ ಕಾಲ ಕಾಲಕ್ಕೆ ರೂಪಿಸುವ / ತಿಳಿಸುವ ನಿಯಮಗಳಿಗೆ ಬದ್ಧರಾಗಿರಬೇಕು.

ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 08131–223336 / 9343535345 / 9448661266ನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ಸಿಳಿಸಿದ್ದಾರೆ.

## ಬೆಳ್ಳಾವಿ ಕೆಪಿಎಸ್ ಶಾಲೆ ಕೊಠಡಿಗಳಿಗೆ ಭೂಮಿಪೂಜೆ: ಮಾದರಿ ಶಾಲೆ ನಿರ್ಮಾಣ: ಸುರೇಶ್‌ಗೌಡ ಸಂಕಲ್ಪ

ತುಮಕೂರು: ತುಮಕೂರು ಗ್ರಾಮಾಂತರ ಕ್ಷೇತ್ರದ ಸರ್ಕಾರಿ ಶಾಲೆಗಳನ್ನು ಸಸಜ್ಜಿತವಾಗಿ ನಿರ್ಮಾಣ ಮಾಡಿ, ಅತ್ಯಾಧುನಿಕ ಸೌಕರ್ಯ ಒದಗಿಸಿ ದೇಶದಲ್ಲೇ ಮಾದರಿ ಶಾಲೆಗಳನ್ನಾಗಿ ಮಾಡಬೇಕು ಎಂದು ತಾವು ಸಂಕಲ್ಪ ಮಾಡಿದ್ದು, ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ ಎಂದು ಶಾಸಕ ಬಿ.ಸುರೇಶ್‌ಗೌಡರು ಮನವಿ ಮಾಡದರು.

ಚೆನ್ನೈ– ಬೆಂಗಳೂರು ಕಾರಿಡಾರ್‌ನ ಸಿಎಸ್‌ಆರ್ ನಿಧಿಯಡಿ ತಾಲ್ಲೂಕಿನ ಬೆಳ್ಳಾವಿ ಕೆಪಿಎಸ್ ಶಾಲೆ ಆವರಣದಲ್ಲಿ 71 ಲಕ್ಷ ರೂ. ವೆಚ್ಚದಲ್ಲಿ ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಗುರುವಾರ ಭೂಮಿ ಪೂಜೆ ನೆರವೇರಿಸಿದ ಶಾಸಕರು, ಕಾಲಮಿತಿಯಲ್ಲಿ ಸುಸ್ಸಜ್ಜಿತವಾದ ಗುಣಮಟ್ಟದ ಕಾಮಗಾರಿಯನ್ನು ಮುಂದಿನ ಶೈಕ್ಷಣಿಕ ವರ್ಷದಲ್ಲಿ ಪೂರ್ಣಗೊಳಿಸಿ ಮಕ್ಕಳಿಗೆ ಅನುಕೂಲ ಮಾಡಿಕೊಡುವಂತೆ ಗುತ್ತಿಗೆದಾರರಿಗೆ ಹಾಗೂ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ತಮ್ಮ ಕ್ಷೇತ್ರದ ಯಾವುದೇ ಸರ್ಕಾರಿ ಶಾಲೆಗಳಲ್ಲಿ ಯಾವುದೇ



ರೀತಿಯ ಕೊರತೆ ಆಗದ ರೀತಿಯಲ್ಲಿ ಎಲ್ಲಾ ಸೌಕರ್ಯಗಳನ್ನು ಒದಗಿಸುವುದಲ್ಲದೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಶಿಕ್ಷಕರಿಗೆ ಸೂಚನೆ ನೀಡಿದರು. ಸರ್ಕಾರಿ ಶಾಲೆಗಳಲ್ಲಿ ಸುಸಜ್ಜಿತ ಕಟ್ಟಡ, ಪ್ರತಿಭಾವಂತ ಶಿಕ್ಷಕರು, ಅಲ್ಲದೆ ಮಕ್ಕಳಿಗೆ ಸರ್ಕಾರದಿಂದ ವಿವಿಧ ಸವಲತ್ತುಗಳನ್ನು ನೀಡಲಾಗುತ್ತಿದೆ. ಹೀಗಿರುವಾಗ ಸರ್ಕಾರಿ ಶಾಲೆಗಳಲ್ಲಿ ಅತ್ಯುತ್ತಮ ಫಲಿತಾಂಶ ಬರಬೇಕು. ಇದಕ್ಕಾಗಿ ಶಿಕ್ಷಕರು, ಪೋಷಕರು, ಎಸ್‌ಡಿಎಂಸಿ ಸದಸ್ಯರು ಕಾಳಜಿ ವಹಿಸಬೇಕು ಎಂದು ಶಾಸಕ ಸುರೇಶ್‌ಗೌಡರು ಮನವಿ ಮಾಡಿದರು.

ಈ ಸಮಯದಲ್ಲಿ ಬೆಳ್ಳಾವಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಶಾಲೆ ಮುಖ್ಯ ಶಿಕ್ಷಕಿ ರೇಖಾವತಿ, ಶಿಕ್ಷಕರುಗಳು ಮುಖಂಡರಾದ ನರಸಿಂಹಮೂರ್ತಿ, ಮಲ್ಲಿಕಾರ್ಜುನ, ದಿನೇಶ್, ರವಿಶಂಕರ್, ಕೃಷ್ಣಪ್ಪ, ಕಾರ್ಯಪಾಲಕ ಅಭಿಯಂತರ ಅನಿಲ್ ಕುಮಾರ್ ರಾಥೋಡ್, ಸಹಾಯಕ ಕಾರ್ಯಪಾಲಕ ಅಭಿಯಂತರ ಪ್ರಸನ್ನ ಕುಮಾರ್, ಸಹಾಯಕ ಅಭಿಯಂತರರಾದ ಜನಾರ್ಧನ್ ಮತ್ತು ಶಶಿಕುಮಾರ್, ಗುತ್ತಿಗೆದಾರರಾದ ಉಮೇಶ್, ಮಧುಸೂಧನ್ ಹಾಗೂ ಗ್ರಾಮಸ್ಥರು ಹಾಜರಿದ್ದರು.

## 'ವೃತ್ತಿ ನಿವೃತ್ತಿ ನಂತರ ಕ್ರಿಯಾಶೀಲ ಬದುಕು ರೂಪಿಸಿಕೊಳ್ಳಿ: ಶಾಸಕ ಶ್ರೀನಿವಾಸ್

ತುಮಕೂರು: ವೃತ್ತಿಯಿಂದ ನಿವೃತ್ತರಾದವರು ಪ್ರವೃತ್ತಿ ರೂಢಿಸಿಕೊಂಡು ಕ್ರಿಯಾಶೀಲವಾಗಿ ಬದುಕಬೇಕು. ಆಗ ವಿಶ್ರಾಂತ ಜೀವನವು ಉತ್ಸಾಹದಿಂದ ಕೂಡಿರುತ್ತದೆ ಎಂದು ಗುಬ್ಬಿ ಶಾಸಕ ಎಸ್.ಆರ್.ಶ್ರೀನಿವಾಸ್ ಹೇಳಿದರು.

ತೋವಿನಕೆರೆಯ ಗಂಗಾಧರೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಶಿಕ್ಷಕರಾಗಿ, ಪ್ರಭಾರ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಹನುಮಂತರಾಯಪ್ಪ ಅವರಿಗೆ ಅವರ ಸ್ನೇಹ ಬಳಗ ನಗರದಲ್ಲಿ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಹನುಮಂತರಾಯಪ್ಪ ಅವರನ್ನು ಸನ್ಮಾನಿಸಿ ಶುಭ ಕೋರಿ ಮಾತನಾಡಿದರು.



ವೃತ್ತಿಯಿಂದ ನಿವೃತ್ತರಾದ ಮಾತ್ರಕ್ಕೆ ಎಲ್ಲವೂ ಮುಗಿದು ಹೋಗುವುದಿಲ್ಲ, ನಿವೃತ್ತರು ಹೊಸ ಪ್ರವೃತ್ತಿ ಆರಂಭಿಸಿ ಹೊಸ ಬದುಕು ರೂಪಿಸಿಕೊಂಡು ಸಾರ್ಥಕವಾಗಿ ಬಾಳಬೇಕು. ಅವರ ಜೀವನ ಶೈಲಿ ಇತರರಿಗೆ ಪ್ರೇರಣೆ ಆಗುವಂತಿರಬೇಕು ಎಂದು ಶಾಸಕ ಎಸ್.ಆರ್.ಶ್ರೀನಿವಾಸ್ ಸಲಹೆ ಮಾಡಿದರು.

ಚಲನಚಿತ್ರ ನಟ ತೋವಿನಕೆರೆ ಹನುಮಂತಗೌಡ ಮಾತನಾಡಿ, ಶಿಕ್ಷಕ ವೃತ್ತಿ ಆರಂಭಿಸಿ ಆದರ್ಶ ಶಿಕ್ಷಕರಾಗಿ ಹೆಸರು ಮಾಡಿದ ಹನುಮಂತರಾಯಪ್ಪ ಅವರು ಬಹಳಷ್ಟು ವಿದ್ಯಾರ್ಥಿಗಳು ಉತ್ತಮ ಬದುಕು ಕಟ್ಟಿಕೊಳ್ಳು ನೆರವಾಗಿದ್ದಾರೆ. ನಿವೃತ್ತಿ ನಂತರವೂ ಅವರು ಕಿರಿಯರಿಗೆ ಮಾರ್ಗದರ್ಶನ ನೀಡುವಂತಹ ಕೆಲಸಗಳಲ್ಲಿ ತೊಡಗಿ ಕೊಂಡುತಾವೂ ಕ್ರಿಯಾಶೀಲರಾಗಿ ನಿವೃತ್ತಿ ಜೀವನದಲ್ಲಿ ಶಾಂತಿ, ನೆಮ್ಮದಿಯಿಂದ ಬಾಳುವಂತಾಗಲಿ ಎಂದು ಆಶಿಸಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಲಕ್ಷ್ಮೀನಾರಾಯಣ, ವಿವಿಧ ಸಂಘಸಂಸ್ಥೆಗಳ ಮುಖಂಡರಾದ ಜೆ.ಜಗದೀಶ್, ತೋವಿನಕೆರೆ ವಿಜಯಕುಮಾರ್, ಮಹಾಲಿಂಗಯ್ಯ, ಹೆಬ್ಬೂರು ಶ್ರೀನಿವಾಸಮೂರ್ತಿ, ಡೈರಿಪ್ರಕಾಶ್, ಗೋವಿಂದರಾಜು, ಸುರೇಶ್, ಸ್ವಾಮಿ, ರವಿ ರಾಥೋಡ್ ಮತ್ತಿತರರು ಭಾಗವಹಿಸಿದ್ದರು.

## ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಸಿ: ಕೆ.ಹೆಚ್. ವೆಂಕಟೇಶ್ ಅವರ ಕಥಾ ಸಂಕಲನ ಲೋಕಾರ್ಪಣೆ

ತುಮಕೂರು: ಸಮೃದ್ಧ ಜಾನಪದ ಸಾಹಿತ್ಯ ಒಳಗೊಂಡ ನಮ್ಮ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅನೇಕ ಸಾಹಿತಿಗಳು ಶ್ರೇಷ್ಠ ಕೃತಿಗಳ ಮೂಲಕ ದೊಡ್ಡ ಕೊಡುಗೆ ನೀಡಿ ಶ್ರೀಮಂತಗೊಳಿಸಿದ್ದಾರೆ. ನಮ್ಮ ನಾಡಿನ ಸಂಸ್ಕೃತಿಯ ಭಾಗವಾಗಿರುವ ಕನ್ನಡ ಸಾಹಿತ್ಯವನ್ನು ಬೆಳೆಸುವ, ಕನ್ನಡ ಕೃತಿಗಳನ್ನು ಕೊಂಡು ಓದಿ ಪ್ರೋತ್ಸಾಹಿಸಲು ಎಲ್ಲರೂ ಸಹಕರಿಸಬೇಕು. ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಸಬೇಕು ಎಂದು ಟಿಎಂಸಿಸಿ ಅಧ್ಯಕ್ಷ ಡಾ.ಎನ್.ಎಸ್. ಜಯಕುಮಾರ್ ಹೇಳಿದರು.

ಗುರುವಾರ ನಗರದ ಬಾಯರ್ಸ್ ಕ್ಯಾಂಟಿನ್‌ನಲ್ಲಿ ನಿವೃತ್ತ ಪ್ರಾಚಾರ್ಯ, ಸಾಹಿತಿ ಕೆ.ಹೆಚ್. ವೆಂಕಟೇಶ್ ರಚಿಸಿರುವ, ಆನಂದ್ ಪಬ್ಲಿಕೇಷನ್‌ನವರು ಪ್ರಕಾಶಿಸಿರುವ 'ಏರಿ ಮೇಲಿನ ಮಾವಿನ ಮರ ಮತ್ತು ಇತರೆ ಕಥೆಗಳು' ಎಂಬ ಕಥಾ ಸಂಕಲನ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಕಥೆಗಾರ ವೆಂಕಟೇಶ್ ಅವರು ಗ್ರಾಮೀಣ ಸೊಗಡಿನ ಭಾಷೆಯನ್ನು ಉತ್ತಮವಾಗಿ ಬಳಸಿಕೊಂಡು ಆಕರ್ಷಕವಾಗಿ ಬರೆದಿರುವ ಕಥೆಗಳು ಓದುಗರ ಗಮನ ಸೆಳೆಯುತ್ತವೆ. ಇಂತಹ ಕೃತಿಗಳು ಹೆಚ್ಚೆಚ್ಚು ಹೊರಬರಲಿ ಎಂದು ಆಶಿಸಿದರು.

ಕನ್ನಡ ಸಾಹಿತ್ಯವು ಆಯಾ ಕಾಲಘಟ್ಟದ ನಮ್ಮ ಜೀವನಶೈಲಿ ಪರಿಚಯಿಸುವ ಪ್ರಮುಖ ಆಕರಗಳಾಗಿ ರೂಪುಗೊಳ್ಳುತ್ತವೆ.



ಕನ್ನಡ ಭಾಷೆಯ ಹಿರಿಮೆ, ಮಹತ್ವದ ಬಗ್ಗೆ ಮಕ್ಕಳಲ್ಲಿ ಅಭಿಮಾನ ಬೆಳೆಸಬೇಕು, ಅವರಲ್ಲಿ ಸಾಹಿತ್ಯಾಸಕ್ತಿ ಬೆಳೆಸಬೇಕು. ಆ ಮೂಲಕ ಕನ್ನಡ ಸಾಹಿತ್ಯವನ್ನು ಉಳಿಸಿಬೆಳೆಸುವ ಕೆಲಸವಾಗಬೇಕು ಎಂದು ಡಾ.ಎನ್.ಎಸ್. ಜಯಕುಮಾರ್ ತಿಳಿಸಿದರು.

ಕೃತಿ ಕುರಿತು ಮಾತನಾಡಿದ ಹಿರಿಯ ಸಾಹಿತಿ ಈಚನೂರು ಇಸ್ಮಾಯಿಲ್, ಯುದ್ಧಗಳ ಕಾರ್ಮೋಡಗಳ ನಡುವೆ ಇಂದು ಜಗತ್ತು ಆತಂಕ ಸ್ಥಿತಿಯಲ್ಲಿದೆ. ಯಾವುದೇ ತತ್ವ, ಸಿದ್ಧಾಂತಗಳಿಂದಲೂ ಯುದ್ಧ ಶಮನ ಮಾಡಿ, ಶಾಂತಿ ಸ್ಥಾಪಿಸಲು ಸಾಧ್ಯವಾಗಿಲ್ಲ. ಆದರೆ ಸಾಹಿತ್ಯಪ್ರೇಮ ಬೆಳೆಸುವ ಮೂಲಕ ಜಗತ್ತಿನಲ್ಲಿ ಶಾಂತಿ, ಸೌಹಾರ್ದತೆ ಬೆಳೆಸಲು ಸಾಧ್ಯವಿದೆ. ಅಂತಹ ವಾತಾವರಣ ಎಲ್ಲೆಡೆ ಮೂಡಬೇಕಾಗಿದೆ ಎಂದರು.

ಕಥೆಗಾರ ಕೆ.ಹೆಚ್. ವೆಂಕಟೇಶ್ ಅವರು ಗ್ರಾಮೀಣ ಪ್ರದೇಶದ ಬದುಕಿನ ತಲ್ಲಣಗಳನ್ನು ಸಹಜವಾಗಿ, ಸರಳವಾಗಿ ಕಥೆಗಳಾಗಿ ಬರೆದು ಗಮನ ಸೆಳೆದಿದ್ದಾರೆ. ಕನ್ನಡ ಸಾಹಿತ್ಯದಲ್ಲಿ ಸಣ್ಣಕಥೆಗಳ ಪ್ರಾಕಾರ ಉನ್ನತ ಸ್ಥಾನದಲ್ಲಿದೆ. ನಮ್ಮ ಕನ್ನಡದ ಲೇಖಕಿ ಬಾನು ಮುಸ್ತಾಕ್ ಅವರ ಸಣ್ಣ ಕಥೆಗಳ ಕೃತಿಗೆ ಬೂಕರ್ ಪ್ರಶಸ್ತಿ ದೊರಕಿರುವುದು ಕನ್ನಡಿಗರು ಹೆಮ್ಮೆ ಪಡುವ ವಿಚಾರ ಎಂದು ಹೇಳಿದರು,

ಕಥೆಗಾರ ಕೆ.ಹೆಚ್. ವೆಂಕಟೇಶ್, ಆನಂದ್ ಪಬ್ಲಿಕೇಷನ್‌ನ ಶಂಕರಾನಂದ್, ಹಿರಿಯ ಕ್ರೀಡಾಪಟು ಟಿ.ಕೆ. ಆನಂದ್, ಸಮಾಜ ಸೇವಕ ಪದ್ಮನಾಬ್(ಮಧು) ಹಾಗೂ ವಿವಿಧ ಸಂಘಸಂಸ್ಥೆಗಳ ಪ್ರಮುಖರು ಸಮಾರಂಭದಲ್ಲಿ ಭಾಗವಹಿಸಿದ್ದರು.

## ಕೈಯಲ್ಲಿನ ಪುಸ್ತಕ ವಿಶ್ವವನ್ನೇ ಪರಿಚಯಿಸುತ್ತದೆ



ಮಧುಗಿರಿ: ಕೈ ಒಳಗಿನ ಪುಸ್ತಕ ವಿಶ್ವವನ್ನೇ ಪರಿಚಯಿಸುತ್ತದೆ. ಹೆತ್ತವರು ಬಾಲ್ಯದಲ್ಲಿ ಮಕ್ಕಳಿಗೆ ಶಿಕ್ಷಣ ಕೊಡಿಸದಿದ್ದರೆ ಎಷ್ಟೇ ಸಂಪತ್ತಿದ್ದರೂ ಪ್ರಯೋಜನಕ್ಕೆ ಬಾರದು ಎಂದು ಹಿರಿಯ ಸಾಹಿತಿ ಮಲನ ಮೂರ್ತಿ ತಿಳಿಸಿದರು.

ಪಟ್ಟಣದ ಪಶ್ಚಿಮ ಬಡಾವಣೆಯಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಚಲ ಕಲ್ಚರಲ್ ಫೌಂಡೇಶನ್ ವತಿಯಿಂದ ಏರ್ಪಡಿಸಿದ್ದ ಅಂತರಾಷ್ಟ್ರೀಯ ಮಕ್ಕಳ ಪುಸ್ತಕ ದಿನಾಚರಣೆಯನ್ನು ಜಿ ಪಿ ರಾಜರತ್ನಂರ "ಒಂದು ಎರಡು ಬಾಳೆ ಎಲೆ ಹರಡು, ಮೂರು ನಾಕು ಅನ್ನ ಹಾಕು........" ಎಂಬ ಶಿಶುಗೀತೆ ಹಾಡಿ ಕಾರ್ಯಕ್ರಮ ಉದ್ಘಾಟಿಸಿ ದುರ್ಗಸಿಂಹನ ಪಂಚತಂತ್ರ, ಜನಪದ ಕತೆಗಳ ಮೂಲಕ ಮಕ್ಕಳ ಸಾಹಿತ್ಯ ಮೊದಲುಗೊಂಡು ಅಕ್ಷರದ ಮೂಲಕ ಮನೋವಿಕಾಸ ವಾಗುತ್ತದೆ ಎಂದರು.

ಅಚಲ ಕಲ್ಚರಲ್ ಫೌಂಡೇಶನ್ ಅಧ್ಯಕ್ಷ ಪ್ರೊ. ಡಿ ಎಸ್ ಮುನೀಂದ್ರ ಕುಮಾರ್ ಮಾತನಾಡಿ ಪುಸ್ತಕದಿಂದ ಮಾತ್ರ ವಿದ್ಯಾರ್ಥಿಯ ವ್ಯಕ್ತಿತ್ವ ರೂಪುಗೊಳ್ಳುತ್ತದೆಯೇ ಹೊರತು ಮೊಬೈಲ್ ಗಳಿಂದಲ್ಲ ಎಂದರು. ನಾ. ಡಿಸೋಜ, ಟಿ ಎಸ್ ನಾಗರಾಜ ಶೆಟ್ಟಿ, ಶಿವಲಿಂಗಪ್ಪ ಹಂದಿಹಾಳ್, ಬಿಳಿಗೆರೆ ಕೃಷ್ಣಮೂರ್ತಿ ಸೇರಿದಂತೆ ಹಲವರು ಮಕ್ಕಳ ಸಾಹಿತ್ಯ ಕೃಷಿ ನಡೆಸಿದ್ದಾರೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕಿ ವಿಜಯಲಕ್ಷ್ಮಿ ಮಾತನಾಡಿ ಪುಸ್ತಕಗಳ ಮಹತ್ವ ಮತ್ತು ಪ್ರಯೋಜನ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಶಿಕ್ಷಕರಾದ ರಂಗನಾಥ್, ನಾಗೇಶಯ್ಯ, ಮಂಜುಳಾ ಇದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.